# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

17 ಏಪ್ರಿಲ್ । ಬುಧವಾರ

17 APRIL 2024


ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 51 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ಲೋಕಸಭೆ ಚುನಾವಣೆ ನಂತರವೂ ಮೈತ್ರಿ ಮುಂದುವರಿಯಲಿದೆ: ಬಿ.ಎಸ್ ಯಡಿಯೂರಪ್ಪ



ದಾವಣಗೆರೆ: ರಾಜ್ಯದಲ್ಲಿ ಜೆಡಿಎಸ್ ಪಕ್ಷಗಳು ಒಂದಾಗಿ ಹೋಗಬೇಕು. ಈ ಹೊಂದಾಣಿಕೆ ಈ ಚುನಾವಣೆಗೆ ಸೀಮಿತವಲ್ಲ. ಮೈತ್ರಿ ಮುಂದುವರೆಯಬೇಕು ಎನ್ನುವುದು ಪ್ರಧಾನಿ ನರೇಂದ್ರ ಮೋದಿ ಅವರ ಆಶಯವಾಗಿದೆ ಎಂದು ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭಾ ಚುನಾವಣೆ ಮಾತ್ರವಲ್ಲದೇ ಮುಂದಿನ ಎಲ್ಲಾ ಚುನಾವಣೆಗಳಲ್ಲೂ ಜೆಡಿಎಸ್ ಜೊತೆಗೆ ಬಿಜೆಪಿ ಮೈತ್ರಿ ಮುಂದುವರಿಯಲಿದೆ ಎಂದರು. ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಿರುವುದರಿಂದ ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲೂ ಗೆಲುವು ಸಾಧಿಸಲು ಪ್ರಯತ್ನ ಶುರುವಾಗಿದೆ. ನಾನು 23 ಕ್ಷೇತ್ರಗಳಲ್ಲೂ ಸುತ್ತಿದ್ದೇನೆ. ಉಳಿದ ಕ್ಷೇತ್ರಗಳಿಗೂ ಹೋಗುವೆ. ದೇವೇಗೌಡರು ಇಳಿವಯಸ್ಸಿನಲ್ಲೂ ಪ್ರಚಾರ ಮಾಡುತ್ತಿದ್ದಾರೆ. ದಾವಣಗೆರೆಯಲ್ಲಿ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಅವರು ಭಾರಿ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್ ಪಕ್ಷದ ಸ್ನೇಹಿತರು ಬಹಳಷ್ಟು ಮಾತನಾಡುತ್ತಾರೆ. ಅದ-ಕ್ಕೆ ಚುನಾವಣೆಯಲ್ಲಿ ಮತದಾರರು ಉತ್ತರ ಕೊಡುತ್ತಾರೆ. ಕಾಂಗ್ರೆಸ್‌ನಲ್ಲಿ ಪ್ರಧಾನಿ ಅಭ್ಯರ್ಥಿ ಯಾರು ಎಂದು ಹೇಳಲಿ ಎಂದು ಸವಾಲು ಹಾಕಿದ ಯಡಿಯೂರಪ್ಪ, ಯಾವುದೇ ವ್ಯಕ್ತಿಯ ಹೆಸರು ಹೇಳುವ ಸ್ಥಿತಿಯಲ್ಲಿ ಕಾಂಗ್ರೆಸ್ ಇಲ್ಲ. ಪ್ರಧಾನಿ ನರೇಂದ್ರ ಮೋದಿ ಅವರು 3ನೇ ಬಾರಿ ಪ್ರಧಾನಿಯಾಗಲಿದ್ದು, ಸಚಿವ ರಾಜನಾಥ್ ಸಿಂಗ್ ನೇತೃತ್ವದಲ್ಲಿ 5 ವರ್ಷಗಳ ಕಾರ್ಯಕ್ರಮವನ್ನು ಈಗಾಗಲೇ ರೂಪಿಸಲಾಗುತ್ತಿದೆ ಎಂದು ಹೇಳಿದರು. ಕಾಂಗ್ರೆಸ್ ಪಕ್ಷ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ವಿರೋಧಿಯಾಗಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡಲಿಲ್ಲ. ಅಂಬೇಡ್ಕರ್ ನಿಧನರಾದಾಗ ಅವರ ಸಂಸ್ಕಾರಕ್ಕೆ ಜಾಗ ನೀಡಲಿಲ್ಲ. ಜವಾಹರಲಾಲ್ ನೆಹರೂ ಸಮಾಧಿಗೆ 52.6 ಎಕರೆ, ಇಂದಿರಾಗಾಂಧಿ ಸಮಾಧಿಗೆ 45 ಎಕರೆ, ರಾಜೀವ್ ಗಾಂಧಿ ಸಮಾಧಿಗೆ 15 ಎಕ-ರೆ ಜಾಗ ನೀಡಲಾಗಿದೆ. ಆದರೆ ಅಂಬೇಡ್ಕರ್ ಅವರಿಗೆ ಅಪಮಾನ ಮಾಡಿರುವುದು ಸರಿಯಲ್ಲ ಎಂದರು.

## ರಾಮ ನವಮಿ: ಅಯೋಧ್ಯೆಯಲ್ಲಿ 'ರಾಮ್ ಲಲ್ಲಾ' ಪ್ರತಿಷ್ಠಾಪನೆ ನಂತರ ಮೊದಲ ಉತ್ಸವ, ಸೂರ್ಯ ಅಭಿಷೇಕಕ್ಕೆ ಸಿದ್ಧತೆ



ಲಕ್ನೋ: ಈ ಬಾರಿಯ ರಾಮ ನವಮಿ ಆಚರಣೆ ಅಯೋಧ್ಯೆ ರಾಮಮಂದಿರದಲ್ಲಿ ಜೋರಾಗಿದೆ. ಅಯೋಧ್ಯೆಯ ರಾಮಮಂದಿರದ ಗರ್ಭಗುಡಿಯಲ್ಲಿ ಪ್ರತಿಷ್ಠಾಪಿಸಲಾದ ರಾಮ್ ಲಲ್ಲಾನಲ್ಲಿ ಇಂದು 'ಸೂರ್ಯ ಅಭಿಷೇಕ'ಕ್ಕೆ ಸಿದ್ಧತೆ ನಡೆಯುತ್ತಿದೆ. ಐತಿಹಾಸಿಕ ಕಾರ್ಯಕ್ರಮಕ್ಕೆ ಅಗತ್ಯವಾದ ಸಂಪೂರ್ಣ ಆಪ್ಟೋ ಮೆಕಾನಿಕಲ್ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಬೆಳಗಿನ ಸೂರ್ಯ ಕಿರಣ ಆಗಮನ ಸಂದರ್ಭದಲ್ಲಿಯೇ ಸೂರ್ಯ ಅಭಿಷೇಕ ನೆರವೇರಲಿದೆ. ಅಯೋಧ್ಯೆ ರಾಮ ಮಂದಿರ

ಪುಟ್ಟ 5 ವರ್ಷದ ಬಾಲ ರಾಮ್ ಲಲ್ಲಾನ ಜನ್ಮದಿನ ರಾಮ ನವಮಿಯಂದು 51 ಇಂಚು ಎತ್ತರದ ವಿಗ್ರಹದ ಹಣೆಯ ಮೇಲೆ ಐದು ನಿಮಿಷಗಳ ಕಾಲ ಸೂರ್ಯನ ಕಿರಣಗಳು ಮಧ್ಯಾಹ್ನ 12:16 ಕ್ಕೆ ಬೀಳುತ್ತದೆ ಎಂದು ದೇವಾಲಯ ನಿರ್ಮಾಣ ಸಮಿತಿ ಅಧ್ಯಕ್ಷ, ನಿವೃತ್ತ ಐಎಎಸ್ ಅಧಿಕಾರಿ ನೃಪೇಂದ್ರ ಮಿಶ್ರಾ ಸೋಮವಾರ ಹೇಳಿದ್ದಾರೆ.

"ಸಮಾರಂಭಕ್ಕೆ ತಾಂತ್ರಿಕ ವ್ಯವಸ್ಥೆಗಳನ್ನು ಮಾಡಲು ಪ್ರಯತ್ನಗಳು ನಡೆಯುತ್ತಿವೆ. ಆ ದೈವಿಕ ಕ್ಷಣಗಳನ್ನು ಅದ್ದೂರಿಯಾಗಿ ಮಾಡಲು ವಿಜ್ಞಾನಿಗಳು ಮುಂದಾಗಿದ್ದಾರೆ ಎಂದರು. ಅಯೋಧ್ಯೆ ರಾಮ ಮಂದಿರ 500 ವರ್ಷಗಳ ಕಾಯುವಿಕೆ ಅಂತ್ಯ: ಉದ್ಘಾಟನೆಯಾಯ್ತು ಅಯೋದ-'ೄ ರಾಮಮಂದಿರ, ರಾಮ ಲಲ್ಲಾ ವಿಗ್ರಹಕ್ಕೆ ಪ್ರಾಣಪ್ರತಿಷ್ಠಾಪನೆ ಹಿಂದೂ ಪಂಚಾಗದ ಮೊದಲ ತಿಂಗಳ ಒಂಬತ್ತನೇ ದಿನದಂದು ಆಚರಿಸಲಾಗುವ ರಾಮ ನವಮಿಯು ಸಾಮಾನ್ಯವಾಗಿ ಮಾರ್ಚ-ಏಪ್ರಿಲ್ ತಿಂಗಳಲ್ಲಿ ಬರುತ್ತದೆ, ಇದು ಭಗವಾನ್ ರಾಮನ ಜನ್ಮವನ್ನು ಸೂಚಿಸುತ್ತದೆ. ಜನವರಿ 22, 2024 ರಂದು ಅಯೋಧ್ಯೆಯಲ್ಲಿ ಬಾಲರಾಮನ ಪ್ರತಿಷ್ಠಾಪಿಸಿದ ನಂತರ ಭಗವಾನ್ ರಾಮನ ಜನ್ಮವನ್ನು ಗುರುತಿಸುವ ಮೊದಲ ರಾಮನವಮಿ ಇದು.

ಕೇಂದ್ರೀಯ ಕಟ್ಟಡ ಸಂಶೋಧನಾ ಸಂಸ್ಥೆಯ (ಅಃಖಖ) ಯೋಜನೆಯ ಮುಖ್ಯ ವಿಜ್ಞಾನಿ ಎಸ್ ಕೆ ಪಾಣಿಗ್ರಾಹಿ, ಒಂದು ವರ್ಷದ ಪ್ರಯತ್ನದ ನಂತರ, ರಾಮನವಮಿಯಂದು ಭಗವಾನ್ ರಾಮನ ಹಣೆಯ ಮೇಲೆ ಸೂರ್ಯಕಿರಣಗಳು ಬೀಳುವಂತೆ ಮಾಡಲು ಸಾಧ್ಯವಾಗಿದೆ. ತಜ್ಞರ ತಂಡವು ಏಪ್ರಿಲ್ 2023 ರಲ್ಲಿ ಈ ಯೋಜನೆಯ ಕೆಲಸವನ್ನು ಪ್ರಾರಂಭಿಸಿತು. ಕೌನ್ಸಿಲ್ ಆಫ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್ (ಅಖಖಖ), ಸೆಂಟ್ರಲ್ ಬಿಲ್ಡಿಂಗ್ ರಿಸರ್ಚ್ ಇನ್‌ಸ್ಟಿಟ್ಯೂಟ್ (ಅಃಖಖ), ರೂರ್ಕಿ ಮತ್ತು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಆಸ್ಟ್ರೋಫಿಸಿಕ್ಸ್ (ಖಖಂ), ಬೆಂಗಳೂರು, ವಿಜ್ಞಾನಿಗಳು ಅದನ್ನು ಯಶಸ್ವಿಯಾಗಿ ರೂಪಿಸಿದರು ಎಂದರು.

ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಮೂಲಗಳ ಪ್ರಕಾರ, ಸೂರ್ಯನ ಬೆಳಕು ರಾಮ್ ಲಲ್ಲಾನ ಹಣೆಯನ್ನು ವೃತ್ತಾಕಾರದ 'ತಿಲಕ'ದಿಂದ ಅಲಂಕರಿಸುತ್ತದೆ, ಸುಮಾರು 75 ಮಿಮೀ ಅಳತೆ, ಸೂರ್ಯವಂಶಿ ರಾಜನ 'ಸೂರ್ಯ ತಿಲಕ'ವನ್ನು ಸಂಕೇತಿಸುತ್ತದೆ.

**ವೃತ್ತಾಕಾರ 'ತಿಲಕ'**

ಸೂರ್ಯವಂಶಿ ರಾಜನ 'ಸೂರ್ಯ ತಿಲಕ'ವನ್ನು ಸಂಕೇತಿಸುವ ಸುಮಾರು 75 ಮಿಮೀ ಅಳತೆಯ ವೃತ್ತಾಕಾರದ 'ತಿಲಕ'ದಿಂದ ಸೂರ್ಯನ ಬೆಳಕು ರಾಮ ಲಲ್ಲಾನ ಹಣೆಯ ಮೇಲೆ ಬೀಳುತ್ತದೆ ಎಂದು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಮೂಲಗಳು ತಿಳಿಸಿವೆ.

## ಸಂಗಣ್ಣ ಬಿಜೆಪಿಗೆ ಗುಡ್ ಬೈ



ಕೊಪ್ಪಳ: ಈ ಬಾರಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಬಿಜೆಪಿ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಮುನಿಸಿಕೊಂಡಿದ್ದ ಹಾಲಿ ಕೊಪ್ಪಳ ಸಂಸದ ಸಂಗಣ್ಣ ಕರಡಿ ಅವರು ಮಂಗಳವಾರ ಕೇಸರಿ ಪಕ್ಷಕ್ಕೆ ಗುಡ್ ಬೈ ಹೇಳಿದ್ದು, ನಾಳೆ ಕಾಂಗ್ರೆಸ್ ಸೇರುವ ಸಾಧ್ಯತೆ ಇದೆ.

ಸಂಗಣ್ಣ ಕರಡಿ ಅವರು ಇಂದು ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ಮತ್ತು ಕೊಪ್ಪಳ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಈಗಾಗಲೇ ಕಾಂಗ್ರೆಸ್ ನಾಯಕರ ಜೊತೆ ಸಂಗಣ್ಣ ಕರಡಿ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದ್ದು, ನಾಳೆ ಕಾಂಗ್ರೆಸ್ ಸೇರಲಿದ್ದಾರೆ ಎನ್ನಲಾಗಿದೆ.

ಸಂಗಣ್ಣ ಕರಡಿ ಅವರು ಇಮೇಲ್ ಮೂಲಕ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ತಮ್ಮ ರಾಜೀನಾಮೆ ಪತ್ರ ಕಳಿಸಿದ್ದಾರೆ.

ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರಿಗೆ ಇಮೇಲ್ ಮೂಲಕ ರಾಜೀನಾಮೆ ಪತ್ರ ಸಲ್ಲಿಸಿದ್ದೇನೆ. ಪಕ್ಷದ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೂ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಪತ್ರ ನೀಡಿದ್ದೇನೆ ಎಂದು ಸಂಗಣ್ಣ ಕರಡಿ ಅವರು ಹೇಳಿದ್ದಾರೆ.

ಈ ಬಾರಿ ಬಿಜೆಪಿ ಹೊಸಮುಖ ಡಾ. ಬಸವರಾಜ್ ಕ್ಯಾವಟರ್ ಅವರಿಗೆ ಟಿಕೆಟ್ ನೀಡಿ-ದ್ದು, ಇದರಿಂದ ಆಕ್ರೊ?ಶಗೊಂಡಿದ್ದ ಸಂಗಣ್ಣ ಕರಡಿ ಅವರನ್ನು ಬಿಜೆಪಿಯ ರಾಜ್ಯಮಟ್ಟದ ನಾಯಕರು ಸಮಾಧಾನ ಪಡಿಸುವ ಪ್ರಯತ್ನ ಮಾಡಿದ್ದರು.

## ನಟ ದ್ವಾರಕೀಶ್ ವಿಧಿವಶ: ಸಿಎಂ, ಡಿಸಿಎಂ ಸೇರಿ ಹಲವು ಗಣ್ಯರ ಸಂತಾಪ

ಕನ್ನಡ ಚಿತ್ರರಂಗದ ಹಿರಿಯ ನಟ ದ್ವಾರಕೀಶ್ ಅವರು ವಿಧಿವಶರಾಗಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

## ಈಶ್ವರಪ್ಪ ಬಂಡಾಯವನ್ನು ರಾಜಾಹುಲಿ ಶಮನ ಮಾಡಲಿ: ಯತ್ನಾಳ್



ವಿಜಯಪುರ: ಯಾವುದೇ ಕಾರಣಕ್ಕೂ ಡಾ.ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನ ಬದಲಾವಣೆ ಮಾಡುವ ಪ್ರಶ್ನೆ ಇಲ್ಲ ಎಂದು ಸಾರಿದ ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ ಯತ್ನಾಳ್, ಬಿ.ಆರ್.ಅಂಬೇಡ್ಕರ್ ಅವರಿಗೆ ಭಾರತರತ್ನ ಕೊಟ್ಟದ್ದು ಬಿಜೆಪಿ ಸರ್ಕಾರದ ಅವಧಿಯಲ್ಲಿ ಎಂದು ಹೇಳಿದರು.

ನಗರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಯಾರು ಏನೇ ಮಾತನಾಡಿದರೂ ಭಾರತದ ಸಂವಿಧಾನ ಬದಲಾವಣೆ ಮಾಡಲು ಸಾಧ್ಯವಿಲ್ಲ, ಈ ವಿಷಯದನ್ನು ನಾನಲ್ಲ ಸ್ವಯಂ ಪ್ರಧಾನಿ ನರೇಂದ್ರ ಮೋದಿ ಅವರೇ ಸ್ಪಷ್ಟಪಡಿಸಿದ್ದಾರೆ ಎಂದರು.

ಶಿವಮೊಗ್ಗದಲ್ಲಿ ಕೆ.ಎಸ್.ಈಶ್ವರಪ್ಪ ಅವರ ಬಂಡಾಯವನ್ನು ರಾಜಾಹುಲಿ, ರಾಜ್ಯಾಧ್ಯಕ್ಷ ಸೇರಿ ಶಮನ ಮಾಡಬೇಕು. ತಮಗೆ ಬೇಕಾದವರನ್ನು ಪಕ್ಷದ ಉಪಾಧ್ಯಕ್ಷ, ಪದಾಧಿಕಾರಿ ಮಾಡಿಕೊಂಡಿದ್ದು, ಅವರೇ ಪಕ್ಷದ ವಿರುದ್ಧ ಕೆಲಸ ಮಾಡುತ್ತಿದ್ದಾರೆ. ತಕ್ಷಣ ಅಂಥವರ ವಿರುದ್ಧ ಕ್ರಮ ಕೈಗೊಳ್ಳಬೇಕು, ಕೈಗೊಳ್ಳದಿದ್ದರೆ ವಿಜಯೇಂದ್ರ ತಲೆದಂಡ ಆಗಲಿದ್ದಾರೆ ಎಂದರು.

ವಿಜಯಪುರ ಜಿಲ್ಲೆಯ ಸಿಂದಗಿ, ಆಲಮೇಲ, ಕಲಕೇರಿ ಭಾಗದಲ್ಲಿ ರಜಾಕರ ಹಾವಳಿ ಇತ್ತು, ಹೀಗಾಗಿ ವಿಜಯಪುರ ಜಿಲ್ಲೆಗೆ ಸಂವಿಧಾನದ 371 ನೇ ಕಲಂ ಅನ್ವಯ ವಿಶೇಷ ಸ್ಥಾನಮಾನ ಜಾರಿ ಮಾಡಬೇಕು ಎಂಬುದು ಒತ್ತಾಯ ಕೇಳಿ ಬರುತ್ತಿದೆ ಎಂದರು.

## ಮಂಗಳೂರು: ನಿರ್ಮಾಣ ಹಂತದಲ್ಲಿದ್ದ ಸೇತುವೆ ಕುಸಿದು 7 ಮಂದಿಗೆ ಗಾಯ!



ಮಲ್ಲಿಪ್ಪಾಡಿ: ಮಂಗಳೂರಿನಲ್ಲಿ ನಿರ್ಮಾಣ ಹಂತದಲ್ಲಿದ್ದ ಸೇತುವೆ ಕುಸಿದು 7 ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ. ಬಂಟ್ವಾಳದ ಮಲ್ಲಿಪ್ಪಾಡಿಯಲ್ಲಿ ಈ ಘಟನೆ ನಡೆದಿದೆ.

ಗಾಯಗೊಂಡವರನ್ನು ತಕ್ಷಣವೇ ಪುತ್ತೂರು ಹಾಗೂ ಮಂಗಳೂರಿನ ಆಸ್ಪತ್ರೆಗಳಿಗೆ ದಾಖಲಿಸಲಾಯಿತು ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಗಾಯಗೊಂಡವರನ್ನು ತಕ್ಷಣವೇ ಪುತ್ತೂರು ಹಾಗೂ ಮಂಗಳೂರಿನ ಆಸ್ಪತ್ರೆಗಳಿಗೆ ದಾಖಲಿಸಲಾಯಿತು ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಪ್ರಥಮ ಚಿಕಿತ್ಸೆ ಪಡೆದ ನಂತರ ಓರ್ವ ವ್ಯಕ್ತಿ ಪುತ್ತೂರಿನ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಮಲ್ಲಿಪ್ಪಾಡಿ ಮೂಲಕ ಹಾದುಹೋಗುವ ಟ್ರೆಂಚ್ ಬಳಿ ಕುಸಿತ ಸಂಭವಿಸಿದೆ ಎಂದು ಪ್ರಾಥಮಿಕ ತನಿಖೆಗಳು ಸೂಚಿಸಿವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕಾರ್ಮಿಕರು ಡಬಲ್ ಸೆಂಟ್ರಿಂಗ್ ವಿಧಾನವನ್ನು ಬಳಸಿಕೊಂಡು ಸ್ಲ್ಯಾಬ್ ಕೆಲಸದಲ್ಲಿ ತೊಡಗಿದ್ದಾಗ ಕುಸಿತ ಸಂಭವಿಸಿದೆ. ಮೇಲಿನಿಂದ ಕಾಂಕ್ರೀಟ್ ಮಿಶ್ರಣವನ್ನು ಸುರಿಯುವುದರಿಂದ ಕೆಳಭಾಗದ ಸೆಂಟ್ರಿಂಗ್ ರಾಡ್‌ನ ಸಡಿಲಗೊಂಡಿದ್ದು ಮೇಲಿನ ಭಾಗದ ಕುಸಿತಕ್ಕೆ ಕಾರಣವಾಯಿತು ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ನಿರ್ಮಾಣ ಸ್ಥಳದಲ್ಲಿ ಮೇಲ್ವಿಚಾರಕರ ಅನುಪಸ್ಥಿತಿಯು ದುರ್ಘಟನೆಗೆ ಪ್ರಮುಖ ಕಾರಣ ಎಂದು ತಿಳಿದುಬಂದಿದೆ. ಕಾಮಗಾರಿಯ ಯೋಜನೆ ಮತ್ತು ಅನುಷ್ಠಾನದಲ್ಲಿ ನಿರ್ಲಕ್ಷ್ಯವೇ ಘಟನೆಗೆ ಪ್ರಾಥಮಿಕ ಕಾರಣ ಎಂದು ತಜ್ಞರು ಹೇಳಿದ್ದಾರೆ.

## ಗಂಡನಿಂದ ಕಿತ್ತು ಹೆಂಡತಿಗೆ ಕೊಡುವುದೇ ಸಿದ್ದು ಗ್ಯಾರಂಟಿ: ಸಿ.ಟಿ.ರವಿ ವಾಗ್ದಾಳಿ



ವಿಜಯಪುರ : ಕಾಂಗ್ರೆಸ್ ಪಕ್ಷದಲ್ಲಿ ಭಾರತ ಮಾತಾಕಿ ಜೈ ಎನ್ನಲು ಶಾಸಕ ಲಕ್ಷ್ಮಣ ಸವದಿ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಪರವಾನಿಗೆ ಕೇಳುತ್ತಾರೆ. ಪಾಕಿಸ್ಥಾನ ಜಿಂದಾಬಾದ್ ಎನ್ನಲು ಇವರಿಗೆ ಯಾರ ಪರವಾನಿಗೆ ಬೇಕಿಲ್ಲ. ಪಂಚಾಯತ್ನಿಂದ ಪಾರ್ಲಿಮೆಂಟ್ ವರೆಗೆ ಅವರು ಪಾಕಿಸ್ತಾನ ಜಿಂದಾಬಾದ್ ಎನ್ನುತ್ತಾರೆ ಮಾಜಿ ಸಚಿವ ಸಿ.ಟಿ.ರವಿ ಕುಟುಕಿದ್ದಾರೆ.

ಮಂಗಳವಾರ ವಿಜಯಪುರ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದ ರಮೇಶ ಜಿಗಜಿಣಗಿ ಪರ ಬಹಿರಂಗ ನಗರದ ದರ್ಬಾರ ಮೈದಾನದಲ್ಲಿ ಹಮ್ಮಿಕೊಂಡಿದ್ದ ಬಿಜೆಪಿ ಸಮಾವೇಶದಲ್ಲಿ ಮಾತನಾಡಿದ ಅವರು, ಆದ-ರೆ ಬಿಜೆಪಿ ಪಕ್ಷದಲ್ಲಿ ಭಾರತ ಮಾತಾ ಕಿ ಜೈ ಎನ್ನಲು ಯಾರ ಅನುಮತಿ ಬೇಕಿಲ್ಲ. ಎಲ್ಲೆಡೆ ಭಾರತ ಮಾತಾ ಕಿ ಜೈ ಎಂಬ ಘೋಷಣೆ ಕೇಳಿ ಬರಬೇಕು ಎಂದರು.

ದೇಶದಲ್ಲಿ ಬಿಜೆಪಿ ಗೆದ್ದರೆ ಭಾರತ ಮಾತಾಕಿ ಜೈ, ಕಾಂಗ್ರೆಸ್ ಗೆದ್ದರೆ ಪಾಕಿಸ್ತಾನಕ್ಕೆ ಹುಟ್ಟಿದ ಡ್ಯಾಶ್ ಡ್ಯಾಶ್ ಅವರು ಹೇಳುತ್ತಾರೆ. ಇದನ್ನು ಶಾಸಕ ಯತ್ನಾಳ ಬಹಳ ಚನ್ನಾಗಿ ಹೇಳುತ್ತಾರೆ ಎಂದ ರವಿ, ನೆರೆದ ಜನರ ಎರಡೂ ಕೈಮುಷ್ಟಿ ಕಟ್ಟಿಸಿ ಮೇಲೆತ್ತಿ ಭಾರತ ಮಾತಾಕಿ, ಹರ ಹರ ಮಹಾದೇವ, ಬಸವಣ್ಣ, ಕನಕದಾಸ, ವಾಲ್ಮೀಕಿ, ಅಂಬೇಡ್ಕರ್ ಪರ ಜಯ ಘೋಷಣೆ ಹಾಕಿಸಿದರು.

ಈ ಚುನಾವಣೆಯಲ್ಲಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಕಾರ್ಯಕರ್ತರ ಮನೆಗೆ ಹೋಗಿ ಬಾಂಬ್ ಹಾಕಬೇಡಿ, ಬದಲಾಗಿ ದೇಶದ ಕುರಿತು ಮನವರಿಕೆ ಮಾಡಿಕೊಡಿ. ದೇಶ ಉಳಿಸಲು ಬಿಜೆಪಿಗೆ ಮತ ಹಾಕಿ ಎಂದು ಮನವೊಲಿಸಿ ಎಂದು ಮನವಿ ಮಾಡಿದರು.

ಕೇಂದ್ರದಲ್ಲಿ 2004 ರಿಂದ 2014 ರವರೆಗೆ ಆಡಳಿತ ನಡೆಸಿದ ಕಾಂಗ್ರೆಸ್ನವರು ಆಕಾಶ, ಭೂಮಿ, ಪಾತಾಳದಲ್ಲೂ ಲೂಟಿ ಹೊಡೆದರು. ಆದರೆ ಮೋದಿ ನೇತೃತ್ವದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಹಗರಣ ರಹಿತ ಆಡಳಿತದ ಮೂಲಕ ಮಾಡಿದ ಸಾಧನೆ ಜನತೆಯ ಮುಂದಿದೆ. ಭವಿಷ್ಯದಲ್ಲೂ ದೇಶಕ್ಕೆ ಮೋದಿ ಗ್ಯಾರಂಟಿ ಎಂದರು.

ಗಂಡನಿಂದ ಕಿತ್ತು ಹೆಂಡತಿಗೆ ಗ್ಯಾರಂಟಿ : ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ವಿರುದ್ಧ ವಾಗ್ದಾಳಿ ನಡೆಸಿದ ಸಿ.ಟಿ.ರವಿ, ಕ್ವಾಟರ್ ಮದ್ಯದ ಬೆಲೆ 50 ಏರಿಕೆ ಮಾಡಿ, ಅದೇ ಹಣವನ್ನು ಮಹಿಳೆಯರಿಗೆ ನೀಡಲಾಗುತ್ತಿದೆ. ಪಹಣಿ ದರ ಏರಿಕೆ, ವಿದ್ಯುತ್ ಸಂಪರ್ಕ, ಬಸ್ ದರ ಹೀಗೆ ಎಲ್ಲವನ್ನೂ ಏರಿಕೆ ಮಾಡಿದ್ದಾರೆ. ಗಂಡನಿಂದ ಕಿತ್ತು ಹೆಂಡತಿಗೆ ನೀಡುವುದೇ ಸಿದ್ಧರಾಮಯ್ಯ ಕಾಂಗ್ರೆಸ್ ಗ್ಯಾರಂಟಿ ಎಂದು ಟೀಕಿಸಿದರು.

10 ಕೆಜಿ ಅಕ್ಕಿ ಎಲ್ಲಿ : ಕೇಂದ್ರದಿಂದ ಪ್ರಧಾನಿ ನರೇಂದ್ರ ಮೊದಿ ಅವರು ಕೊಡುವ ಅಕ್ಕಿ ಬಿಟ್ಟು ರಾಜ್ಯದ ಕಾಂಗ್ರೆಸ್ ಹೇಳಿದ್ದ ಅವರ ಸರ್ಕಾರದ 10 ಕೆ.ಜಿ. ಅಕ್ಕಿ ಎಲ್ಲಿದೆ ಎಂದು ಸಿದ್ಧರಾಮಯ್ಯ ಶೈಲಿಯಲ್ಲೇ ಕೆಣಕಿದ ರವಿ, ನುಡಿದಂತೆ ನಡೆದಿದ್ದೇವೆ ಎಂದರೆ ಏನು ಎಂದು ಪ್ರಶ್ನಿಸಿದರು.

ದಳ-ಬಿಜೆಪಿ ಹಳೆಯ ಸಂಬಂಧ : ಬಿಜೆಪಿ ಹಾಗೂ ಜನತಾ ದಳದ ಸಂಬಂಧ ಹೊಸದಲ್ಲ, ಹಳೆಯ ಸಂಬಂಧ. 1977 ರ ತುರ್ತು ಪರಸ್ಥಿತಿಯಲ್ಲಿ ಹಾಗೂ ರಾಮಕೃಷ್ಣ ಹೆಗಡೆ ಅವರು ಮುಖ್ಯಮಂತ್ರಿ ಆಗಿದ್ದಾಗ ಬಿಜೆಪಿ ಪಕ್ಷದಿಂದ ನಾವು ಬೆಂಬಲ ನೀಡಿದ್ದೇವು ಎಂದರು. ಈ ಹಿಂದೆ ಕೂಡ 20-20 ಮ್ಯಾಚ್ ಇದ್ದಾಗ ಕುಮಾರಸ್ವಾಮಿ ಅವರನ್ನು ಮುಖ್ಯಮಂತ್ರಿ ಮಾಡಿದ್ದೇವೆ. ಮಾಜಿ ಪ್ರಧಾನಿ ದೇವೇಗೌಡರು ನಮಗೆ ಮಂಡಿ ನೋವಿದೆ ಆದರೆ ಬುದ್ದಿ ಇದೆ ಹಾಗಾಗಿ ಮೋದಿ ಅವರಿಗೆ ಬೆಂಬಲ ನೀಡಿದ್ದೇವೆ ಎಂದಿದ್ದಾರೆ ಎಂದ ಸಿ.ಟಿ.ರವಿ.

ಕಾಂಗ್ರೆಸ್ ಗಂಡೇ ಇಲ್ಲ : ಕಾಂಗ್ರೆಸ್‌ನಲ್ಲಿ ಮದುವೆ ಗಂಡೇ ಇಲ್ಲ. ಗಂಡು ಯಾರೆ-ಂದು ಗೊತ್ತಿಲ್ಲದೇ ಮದುವೆ ಆಗೋದು ಹೇಗೆ ಎಂದು ಛೇಡಿಸಿದ ಅವರು, ರಾಹುಲ್ ಗಾಂಧಿ ಮದುವೆ ಗಂಡು ಎಂದರೆ ಓಡಿ ಹೋಗುತ್ತಾರೆ, ನಮ್ಮ ಗಂಡು ನರೇಂದ್ರ ಮೋದಿ ಹತ್ತಾರು ಯೋಜನೆ ಮಾಡಿರೋ ಗಂಡು ಮೋದಿ ಎಂದು ಶ್ಲಾಘಿಸಿದರು.

## ಅಪ್ಪ ಮಕ್ಕಳ ಶಿಕಾರಿ ನಾನು ಮಾಡುತ್ತೇನೆ. ವಿಜಯೇಂದ್ರ ವಿರುದ್ಧ ಈಶ್ವರಪ್ಪ ಕಿಡಿ

ಶಿವಮೊಗ್ಗ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಕೆ.ಎಸ್. ಈಶ್ವರಪ್ಪ ವಾಗ್ದಾಳಿ ನಡೆಸಿದ್ದಾರೆ, ಇಂದು ಪಕ್ಷೇತರ ಅಭ್ಯರ್ಥಿಯಾಗಿ ಕಣಕಿಳಿಯುವುದಾಗಿ ಹೇಳಿಕೆ ನೀಡಿದ ಈಶ್ವರಪ್ಪ ಅವರು ಇಂದು ಶಿವಮೊಗ್ಗ ಜಿಲ್ಲಾ ನ್ಯಾಯಾಲಯದ ಬಳಿ ಪ್ರಚಾರ ನಡೆಸಿದರು.

ಈ ಕುರಿತು ಮಾಹಿತಿ ನೀಡಿದ ಅವರು ಶಿವಮೊಗ್ಗದಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಇವತ್ತು ಕೋರ್ಟ್ ಮುಂಭಾಗದಲ್ಲಿ ವಕೀಲರನ್ನ ಭೇಟಿ ಮಾಡಿದ್ದೇನೆ. ವಕೀಲರು ಒಳ್ಳೆಯ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅಲ್ಲದೆ ನಿಮ್ಮ ನಿರ್ಧಾರ ಸರಿಯಿದೆ ಬೆಂಬಲ ಕೊಡ್ತೇವೆ ಎಂದಿದ್ದಾರೆ ಎಂದು ಹೇಳಿದ್ದಾರೆ.



**ವಿಜಯೇಂದ್ರ ವಿರುದ್ಧ ಈಶ್ವರಪ್ಪ ವಾಗ್ದಾಳಿ:**

ವಿಜಯೇಂದ್ರ ಹೇಳಿಕೆ ವಿರುದ್ಧ ಕಿಡಿಕಾರಿದ ಈಶ್ವರಪ್ಪ ಅವರು ವಾಗ್ದಾಳಿ ನಡೆಸಿದರು ನಿನ್ನ ಪುಕ್ಸಟ್ಟೆ ಮಾತುಗಳಿಗೆ ನಾನು ಬೆಲೆ ಕೊಡಲ್ಲ.. ರಾಜ್ಯಾಧ್ಯಕ್ಷ ಆಗೋಕೆ ನಿನಗೇನು ಯೋಗ್ಯತೆ ಇದೆ..? ನಲವತ್ತು ವರ್ಷ ಪಕ್ಷಕ್ಕಾಗಿ ನಾನು ಶ್ರಮ ಹಾಕಿದ್ದೇನೆ. ನಿಮ್ಮಪ್ಪನ ಶ್ರಮದಿಂದ ನೀನು ರಾಜ್ಯಾಧ್ಯಕ್ಷ ಆಗಿದ್ದೀಯಾ.. ಈ ರೀತಿ ಮಾತಾಡೋಕೆ ನಿನಗೆ ಯೋಗ್ಯತೆ ಇಲ್ಲ.. ಜಿಲ್ಲೆಯ ಜನಕ್ಕೆ ನಾನು ಏನು ಮಾಡಿದ್ದೇನೆ ಜಿಲ್ಲೆಯ ಜನಕ್ಕೆ ಗೊತ್ತಿದೆ. ಶಿಕಾರಿಪುರದಲ್ಲಿ 60 ಸಾವಿರ ಇದ್ದ ಲೀಡ್ 10 ಸಾವಿರಕ್ಕೆ ಇಳಿದಿದೆ.

## ಗೋವಾದಲ್ಲಿ ಕನ್ನಡಿಗರ ಮೇಲಿನ ದಾಳಿ ಸಹಿಸಲು ಸಾಧ್ಯವಿಲ್ಲ: ಮುಖ್ಯಮಂತ್ರಿ ಚಂದ್ರು

ಬೆಂಗಳೂರು: ಉತ್ತರ ಗೋವಾದ ಸಾಂಗೋಲ್ಡಾ ಪ್ರದೇಶದಲ್ಲಿರುವ ಕನ್ನಡಿಗರ 15 ಮನೆಗಳನ್ನು ಜೆಸಿಬಿ ಬಳಸಿ ನೆಲಸಮಗೊಳಿಸಿರುವುದನ್ನು ಆಮ್ ಆದ್ಮಿ ಪಾರ್ಟಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಖಂಡಿಸಿದ್ದಾರೆ.

ನಾಲ್ಕಾರು ದಶಕಗಳಿಂದ ನೆಲೆಸಿರುವ ಕನ್ನಡಿಗರ ಮೇಲೆ ಗೋವಾ ಸರ್ಕಾರ ನಡೆಸುತ್ತಿರುವ ಅಮಾನವೀಯ ಕೃತ್ಯಗಳು ಖಂಡನಾರ್ಹ. ನ್ಯಾಯಾಲಯದ ನಿರ್ದೇಶನಗಳನ್ನು ಮೀರಿ ಏಕಾಏಕಿ ಮನೆಗಳನ್ನೆಲ್ಲ ಒಡೆದು ಬೀದಿಪಾಲು ಮಾಡಿರುವುದು ಅಕ್ಷಮ್ಯ. ಗೋವಾದ ಮತದಾರರಾಗಿ, ಗೋವಾ ಅಭಿವೃದ್ಧಿಗೆ ಸತತ ಶ್ರಮಿಸುತ್ತಿರುವ ಕನ್ನಡಿಗರ ಮನೆಗಳನ್ನು ಜೆಸಿಬಿ ಬಳಸಿ ನೆಲಸಮಗೊಳಿಸುತ್ತಿರುವುದು ಅಘಾತಕಾರಿ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕನ್ನಡಿಗರ ಮೇಲೆ ನಿರಂತರವಾಗಿ ದೌರ್ಜನ್ಯ ಎಸಗುತ್ತಿರುವುದನ್ನು ಸಹಿಸಲು ಸಾಧ್ಯವಿಲ್ಲ. ತಕ್ಷಣ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿರಿಯ ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸಿ ಪರಿಶೀಲಿಸಿ ಪುನರ್ವಸತಿ ಕಲ್ಪಿಸಿಕೊಡಬೇಕು ಹಾಗೂ ಕೇಂದ್ರ ಸರ್ಕಾರ ಗೋವಾದ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರ ಜೊತೆ ಮಾತನಾಡಿ ಪರಿಸ್ಥಿತಿ ತಿಳಿಗೊಳಿಸಬೇಕು ಒತ್ತಾಯಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಮಾತೆತ್ತಿದರೆ ಒಂದು ರಾಷ್ಟ್ರ ಎನ್ನುತ್ತಾರೆ. ಆದರೆ ಒಂದೇ ರಾಷ್ಟ್ರದಲ್ಲಿ ತಮ್ಮದೇ ಸರ್ಕಾರವಿರುವ ಗೋವಾ ಸರ್ಕಾರವು ಕನ್ನಡಿಗರನ್ನು ಶತ್ರುಗಳನ್ನಾಗಿ ನೋಡುತ್ತಿದ್ದರೂ ಕಣ್ಮುಚ್ಚಿ ಕುಳಿತಿರುವುದೇಕೆ? ಒಂದು ರಾಷ್ಟ್ರ ಎಂಬ ಪರಿಕಲ್ಪನೆ ಎಂದರೆ ಇದೇನಾ? ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳು ಬಿಜೆಪಿಯೇತರ ರಾಜ್ಯಗಳ ಮೇಲೆ ಏನು ದಬ್ಬಾಳಿಕೆ ನಡೆಸಿದರೂ ಸಹಿಸಿಕೊಂಡಿರಬೇಕೆ? ಎಂದು ಕಿಡಿ-ಕಾರಿದ್ದಾರೆ.

ಗೋವಾದ ದಬ್ಬಾಳಿಕೆ ವಿರುದ್ಧ ಕರ್ನಾಟಕದ 26 ಸಂಸದರು ಧ್ವನಿಯೆತ್ತುತ್ತಿಲ್ಲ ಏಕೆ? ಅವರನ್ನು ಸಂಸತ್ತಿಗೆ ಆರಿಸಿ ಕಳುಹಿಸಿರುವುದು ಕನ್ನಡಿಗರ ಹಿತ ಕಾಯುವುದಕ್ಕೋ ಅಥವಾ ಬಿಜೆಪಿ ಆಡಳಿತದ ಸರ್ಕಾರಗಳು ಕನ್ನಡಿಗರ ಮೇಲೆ ಏನೇ ದೌರ್ಜನ್ಯ ಎಸಗಿದರು ಬಾಯಿಮುಚ್ಚಿಕುಳಿತುಕೊಳ್ಳುವುದಕ್ಕೋ? ಕನ್ನಡ ಭಾಷೆ, ಕಾವೇರಿ ನೀರು, ಕನ್ನಡಿಗರ ಹಿತಾಸಕ್ತಿಗೆ ನಯಾಪೈಸೆಯ ಬೆಲೆ ಕೊಡದ ಇಂತಹ ಸಂಸದರಿಗೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಮತದಾರರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಈಶ್ವರಪ್ಪ ಸ್ಪರ್ಧೆಯಿಂದ ಬಿಜೆಪಿಗೆ ಲಾಭ: ಆರ್. ಅಶೋಕ್



ಬೆಂಗಳೂರು: ಪಕ್ಷದಲ್ಲಿರುವ ಬಹುತೇಕ ಅಸಮಾಧಾನವನ್ನು ವರಿಷ್ಠರು ನೀಗಿಸಿದ್ದಾರೆ. ಮೋದಿ ಅವರೇ ಮತ್ತೆ ಪ್ರಧಾನಿಯಾಗಬೇಕೆನ್ನುವ ಗುರಿಯ ಮುಂದೆ ಸಣ್ಣ-ಪುಟ್ಟ ಸಮಸ್ಯೆಗಳು ದೊಡ್ಡ ದಾಗುವುದಿಲ್ಲ. ಶಿವಮೊಗ್ಗದಲ್ಲಿ ಈಶ್ವರಪ್ಪ ಸ್ಪರ್ಧಿಸಿದರೂ ಯಾರ ಮತವನ್ನು ಅವರು ಕಸಿಯುತ್ತಾರೆ ಎಂಬುದು ಅವರಿಗೇ ಗೊತ್ತಿಲ್ಲ.

ಈಶ್ವರಪ್ಪ ಸ್ಪರ್ಧೆಯಿಂದ ಬಿಜೆಪಿಗೆ ಒಳ್ಳೆಯದೇ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ 'ಉದಯವಾಣಿ'ಗೆ ವಿಶೇಷ ಸಂದರ್ಶನ ನೀಡಿರುವ ಅವರು, ಮೊದಲ ಹಂತದ ಮತದಾನ ನಡೆಯಲಿರುವ 14 ಕ್ಷೇತ್ರಗಳಲ್ಲಿ ಪಕ್ಷದ ಗೆಲುವಿಗಾಗಿ ನಡೆಯುತ್ತಿರುವ ತಂತ್ರಗಾರಿಕೆಗಳ ಬಗ್ಗೆ ಮಾತನಾಡಿದ್ದಾರೆ.

ನಿಮ್ಮ ಪಕ್ಷದೊಳಗಿನ ಅಸಮಾಧಾನಿತರನ್ನು ಸಮಾಧಾನಪಡಿಸುವಲ್ಲಿ ವಿಫಲರಾಗಿದ್ದೀರಿ ಎನಿಸುವುದಿಲ್ಲವೇ?

ಟಿಕೆಟ್ ಸಿಗದೆ ಇದ್ದಾಗ ಅಸಮಾಧಾನ ಸಹಜ. ರಾಜ್ಯ ನಾಯಕರು, ರಾಷ್ಟ್ರೀಯ ನಾಯಕರು ಪ್ರಯತ್ನಪಟ್ಟು ಶೇ. 95ರಷ್ಟು ಅಸಮಾಧಾನ ಶಮನಗೊಳಿಸಿದ್ದೇವೆ. ಮೋದಿ ಪ್ರಧಾನಿ ಆಗಬೇಕೆನ್ನುವ ಗು-ರಿಯ ಮುಂದೆ ಸಣ್ಣ-ಪುಟ್ಟ ಸಮಸ್ಯೆಗಳು ದೊಡ್ಡದಾಗುವುದಿಲ್ಲ. ಶಿವಮೊಗ್ಗದಲ್ಲಿ ಈಶ್ವರಪ್ಪ ಸ್ಪರ್ಧಿಸಿದರೂ ಯಾರ ಮತವನ್ನು ಅವರು ಕಸಿಯುತ್ತಾರೆ ಎಂಬುದು ಅವರಿಗೇ ಗೊತ್ತಿಲ್ಲ. ಈಶ್ವರಪ್ಪ ಅವರ ಸ್ಪರ್ಧೆಯಿಂದ ಬಿಜೆಪಿಗೆ ಒಳ್ಳೆಯದೇ ಆಗಲಿದೆ. ಬಿಜೆಪಿ ಎಂದರೆ ಕಮಲ. ಅದಕ್ಕೆ ಮತ ಬಿದ್ದೇ ಬೀಳುತ್ತದೆ. ಇನ್ನು ಎಸ್.ಟಿ. ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಅವರನ್ನು ಬಿಟ್ಟೇ ನಾವು ಕೆಲಸ ಮಾಡುತ್ತಿದ್ದೇವೆ. ಅವರಿಂದ ಒಂದು ಮತವೂ ಬಿಜೆಪಿಗೆ ಬರುವುದಿಲ್ಲ. ಅವರನ್ನು ನಂಬಿಕೊಂಡು ನಾವಿಲ್ಲ.

**ಮೊದಲ ಹಂತದ 14 ಕ್ಷೇತ್ರಗಳ ಚುನಾವಣೆಯಲ್ಲಿ ಬಿಜೆಪಿ ಎಷ್ಟು ಸ್ಥಾನ ಗೆಲ್ಲಲಿದೆ?**

ದೇಶಾದ್ಯಂತ ಮೋದಿ ಪರ ಅಲೆಯಿದೆ. ವಿಶ್ವಮಟ್ಟದಲ್ಲಿ ದೇಶದ ಹೆಸರು ಉಳಿಸುವವರು ಪ್ರಧಾನಿ ಆಗಬೇಕು. ಅವರೇ ಮೋದಿ. 10 ವರ್ಷದಲ್ಲಿ ಮಾಡಿರುವ ಸಾಧನೆಗಳನ್ನು ಜನರ ಮುಂದಿಡುತ್ತೇವೆ. ಮುಂದಿನ 5 ವರ್ಷಗಳ ದೂರದೃಷ್ಟಿ ಇಟ್ಟುಕೊಂಡು ಪ್ರಕಟಪಡಿಸಿರುವ ಸಂಕಲ್ಪ ಪತ್ರವನ್ನೂ ಜನರೆದುರು ಇಡುತ್ತೇವೆ. ಕಳೆದ ಚುನಾವಣೆ ಸಂದರ್ಭದಲ್ಲಿ ಸಮೀಕ್ಷೆಗಳು ಬೇರೆ ಸಂಖ್ಯೆಗಳನ್ನೇ ಹೇಳಿದ್ದವು. ನಾವು 25 ಸ್ಥಾನ ಗೆದಿದ್ದೆವು. ಈ ಬಾರಿಯೂ ಚಮತ್ಕಾರಿ ಫಲಿತಾಂಶ ಬರಲಿದೆ.


**ಜೆಡಿಎಸ್ ಜತೆಗೆ ಮೈತ್ರಿ ಆದರೂ ಸಮನ್ವಯ ಕೊರತೆ ಕಾಡುತ್ತಿದೆ. ಒಳ ಪೆಟ್ಟು ಬೀಳುವುದಿಲ್ಲವೇ?**

ಜೆಡಿಎಸ್ ಮೈತ್ರಿಯಿಂದ ಹಳೆ ಮೈಸೂರು ಭಾಗದಲ್ಲಿ ಸಾಕಷ್ಟು ನೆರವು ಸಿಗಲಿದೆ. ನಮ್ಮ-ಅವರ ಕಾರ್ಯಕರ್ತರ ನಡುವೆ ಸಮಸ್ಯೆಗಳಿಲ್ಲ.

ಹೀಗಾಗಿ ಸಮನ್ವಯ ಕೊರತೆ ಇಲ್ಲವೇ ಇಲ್ಲ. ಒಳ ಏಟು ಬೀಳುವುದೂ ಇಲ್ಲ. ಅವರ ಮತಗಳು ನಮಗೆ ಸಿಗಲಿವೆ. ಮಂಡ್ಯದಲ್ಲಿ ಸುಮಲತಾ ಬೆಂಬಲ ಸಿಕ್ಕಿದೆ. ಅಂಬರೀಶ್ ಅಭಿಮಾನಿಗಳಿದ್ದಾರೆ. ಮಂಡ್ಯ, ಮೈಸೂರು ಭಾಗದಲ್ಲಿ ನೆರವಾಗಲಿದೆ. ಚಾಮರಾಜನಗರದಲ್ಲೂ ಶ್ರೀನಿವಾಸಪ್ರಸಾದ್ ಅವರು ಬಿಜೆಪಿ ಬೆಂಬಲಿಸುತ್ತಾರೆ.

ಮೈಸೂರು ಬಿಡದಂತೆ ಸಿಎಂ ಸಿದ್ದರಾಮಯ್ಯರನ್ನು ಕಟ್ಟಿ ಹಾಕುವಲ್ಲಿ ಯಶಸ್ವಿಯಾಗಿದ್ದೇವೆ. ಡಿಸಿಎಂ ಬೆಂಗಳೂರು ಗ್ರಾಮಾಂತರ ಬಿಟ್ಟು ಬಾರದಂತೆ ನಾವೇ ಮಾಡಿದ್ದೇವೆ. ಹೃದಯ ಇಲ್ಲದ ಬಂಡೆ ಬೇ-ಕೋ ಹೃದಯವಂತ ವೈದ್ಯ ಬೇಕೋ ಎನ್ನುವ ಸ್ಥಿತಿ ಬೆಂಗಳೂರು ಗ್ರಾಮಾಂತರದಲ್ಲಿದೆ.

# ದಾಖಲೆ ಇಲ್ಲದೆ ಸಾಗಿಸುತ್ತಿದ್ದ 13 ಲಕ್ಷ ರೂ. ಜಪ್ತಿ



ಚಿಕ್ಕಮಗಳೂರು: ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದು, ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ಜೈನ್ ರಸ್ತೆಯಲ್ಲಿ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 13.10 ಲಕ್ಷ ಹಣ ಜಪ್ತಿ ಮಾಡಿಕೊಂಡಿದ್ದಾರೆ.

ರಾತ್ರಿ ಜೈನ್ ನಗರ ರಸ್ತೆಯಲ್ಲಿ ಇಬ್ಬರು ವ್ಯಕ್ತಿಗಳು ಕಾರು ನಿಲ್ಲಿಸಿಕೊಂಡಿದ್ದರು. ಈ ವೇಳೆ ಕಾರು ತಪಾಸಣೆ ನಡೆಸಿದ ಅಧಿಕಾರಿಗಳು 13.10 ಹಣವನ್ನು ಜಪ್ತಿ ಮಾಡಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಚುನಾವಣಾ ತರಬೇತಿಗೆ ಚಕ್ಕರ್, ಅನುಚಿತ ವರ್ತನೆ: ಶಿಕ್ಷಕ ಅಮಾನತು




ದಾವಣಗೆರೆ: ಚುನಾವಣಾ ಮತಗಟ್ಟೆ ಮಟ್ಟದ ಅಧಿಕಾರಿ ಸಿಬ್ಬಂದಿಗಳಿಗೆ ಏಪ್ರಿಲ್ 8 ರಂದು ಚನ್ನಗಿರಿ ಯಲ್ಲಿ ಏರ್ಪಡಿಸಿದ ತರಬೇತಿ ಕಾರ್ಯಾಗಾರದಲ್ಲಿ ಬೆಳಿಗ್ಗೆ ಹಾಜರಾಗಿ ಮಧ್ಯಾಹ್ನ ತರಬೇತಿಗೆ ಹಾಜರಾಗದೆ ಅನ್ಯ ಮಹಿಳಾ ಸಿಬ್ಬಂದಿಯೊಂದಿಗೆ ಹೊರ ಹೋಗಿದ್ದು ಇದನ್ನು ಪ್ರಶ್ನಿಸಿದ ತಹಶೀಲ್ದಾರ್ ಅವರೊಂದಿಗೆ ಅನುಚಿತ ವರ್ತನೆ ಮಾಡಿದ ಚನ್ನಗಿರಿ ಎಸ್.ಕೆ.ಎಂ.ಎಸ್ ಮಿಲ್ಲತ್ ಪ್ರೌಢಶಾಲೆ ಸಹ ಶಿಕ್ಷಕರಾದ ಸೈಯದ್ ಸುಲ್ತಾನ್ ಅಹಮದ್ ಇವರನ್ನು ಸೇವೆಯಿಂದ ಅಮಾನತು ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ.

ದಾವಣಗೆರೆ ಲೋಕಸಭಾ ಕ್ಷೇತ್ರದ ಮತಗಟ್ಟೆ ಅಧ್ಯಕ್ಷ, ಸಹಾಯಕ ಅಧ್ಯಕ್ಷಾಧಿಕಾರಿ ಸಿಬ್ಬಂದಿಗಳಿಗೆ ಏಪ್ರಿಲ್ 8 ರಂದು ಮೊದಲ ಹಂತದ ತರಬೇತಿಯನ್ನು ಎಲ್ಲಾ ತಾಲ್ಲೂಕುಗಳಲ್ಲಿ ಹಮ್ಮಿಕೊಳ್ಳಲಾಗಿತ್ತು. ಚನ್ನಗಿರಿಯಲ್ಲಿ ಶ್ರೀಶ್ರೀಶ್ರೀ ಶಿವಲಿಂಗೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತರಬೇತಿ ನಡೆದಿರುತ್ತದೆ.

ಬೆಳಿಗ್ಗೆ ತರಬೇತಿ ಮುಗಿದು ಮಧ್ಯಾಹ್ನ 3 ಗಂಟೆಗೆ ಕೊಠಡಿ ಸಂಖ್ಯೆ 10 ರಲ್ಲಿ ತರಬೇತಿ ಆರಂಭವಾಗಿತ್ತು. ಆದರೆ ಯಾವುದೇ ಅನುಮತಿ ಇಲ್ಲದೆ ತರಬೇತಿಗೆ ಹಾಜರಾದ ಅನ್ಯ ಮಹಿಳಾ ಸಿಬ್ಬಂದಿಯೊಂದಿಗೆ ತರಬೇತಿಯಿಂದ ಹೊರ ಹೋಗುತ್ತಿರುವಾಗ ಇದನ್ನು ಪ್ರಶ್ನಿಸಿದ ತಹಶೀಲ್ದಾರ್ ಅವರೊಂದಿಗೆ ಮಹಿಳಾ ಸಿಬ್ಬಂದಿ ಸಮ್ಮುಖದಲ್ಲಿಯೇ ಅಸಭ್ಯವಾಗಿ ವರ್ತಿಸಿದ್ದಾರೆ, ಜೊತೆಗೆ ಅನ್ಯ ಸಿಬ್ಬಂದಿಯವರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದು ಚುನಾವಣಾ ಪ್ರಾಧಿಕಾರಕ್ಕೆ ಮುಜುಗರ ಉಂಟು ಮಾಡಿರುತ್ತಾರೆ. ಇಂದು ಪ್ರಜಾಪ್ರತಿನಿಧಿ ಕಾಯ್ದೆ 1951 ರ ಕಲಂ 134 ರ ನಿಯಮ ಉಲ್ಲಂಘನೆ ಮತ್ತು ಕರ್ನಾಟಕ ನಾಗರೀಕ ಸೇವಾ ನಡತೆ ನಿಯಮಾವಳಿ 1966 ಹಾಗೂ ತಿದ್ದುಪಡಿ ನಿಯಮಗಳು 2021 ರ ನಿಯಮ ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಅಮಾನತು ಮಾಡಿ ಕೇಂದ್ರಸ್ಥಾನ ಬಿಡದಂತೆ ಆದೇಶಿಸಲಾಗಿದೆ.

# ಲೋಕಸಭಾ ಚುನಾವಣೆ–2024

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ: ಏಪ್ರೀಲ್ 16 ರವರೆಗೆ ಒಂದು ಕೋಟಿ ರೂ. ನಗದು ವಶಕ್ಕೆ




ಚಿಕ್ಕೋಡಿ: ಲೋಕಸಭಾ ಸಾರ್ವತ್ರಿಕ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಮಾ.16 ರಂದು ನೀತಿ ಸಂಹಿತೆ ಜಾರಿಯಾಗಿದ್ದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಮಾ. 16 ರಿಂದ ಏಪ್ರೀಲ್ 16ರ ವರೆಗೆ 1,16,68,350 ರೂ. ನಗದನ್ನು ವಶಕ್ಕೆ ಪಡೆಯಲಾಗಿರುತ್ತದೆ ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಸಿ.ಇ.ಓ. ಆದ ರಾಹುಲ ಶಿಂಧೆ ಅವರು ತಿಳಿಸಿರುತ್ತಾರೆ.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವ ನಿಟ್ಟಿನಲ್ಲಿ 32 ಚೆಕ್ ಪೋಸ್ಟಗಳನ್ನು ನಿರ್ಮಿಸಲಾಗಿರುತ್ತದೆ.

148 ಸೆಕ್ಟರ ಅಧಿಕಾರಿಗಳು, 96 ಎಸ್.ಎಸ್.ಟಿ, 29 ಎಫ್.ಎಸ್.ಟಿ, 25 ವಿ.ಎಸ್.ಟಿ, 08 ವೀಡಿಯೋ ವೀವಿಂಗ ತಂಡಗಳನ್ನು ರಚಿಸಲಾಗಿದ್ದು ಈ ತಂಡಗಳು ದಿನದ ಇಪ್ಪತ್ತನಾಲ್ಕು ಗಂಟೆಯು ಕಾರ್ಯಪ್ರವೃತ್ತವಾಗಿರುತ್ತವೆ.

# ಲೋಕಸಭಾ ಸಾರ್ವತ್ರಿಕ ಚುನಾವಣೆ–2024; ಜಿಲ್ಲೆಗೆ ವೆಚ್ಚ ವೀಕ್ಷಕರ ಆಗಮನ

ಧಾರವಾಡ: ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಹಿನ್ನೆಲೆಯಲ್ಲಿ ಭಾರತ ಚುನಾವಣಾ ಆಯೋಗವು 11 ಧಾರವಾಡ ಲೋಕಸಭಾ ಮತಕ್ಷೇತ್ರಕ್ಕೆ ನೇಮಿಸಿರುವ ವೆಚ್ಚ ವೀಕ್ಷಕರು ಧಾರವಾಡ ಜಿಲ್ಲೆಗೆ ಆಗಮಿಸಿದ್ದಾರೆ.

ಐ.ಆರ್.ಎಸ್ ಅಧಿಕಾರಿ ಕೆ.ಪಿ. ಜಯಕರ್ ಅವರು 69–ನವಲಗುಂದ, 71–ಧಾರವಾಡ, 73–ಹುಬ್ಬಳ್ಳಿ–ಧಾರವಾಡ (ಕೇಂದ್ರ), 74– ಹುಬ್ಬಳ್ಳಿ–ಧಾರವಾಡ (ಪಶ್ಚಿಮ) ವಿಧಾನಸಭಾ ಕ್ಷೇತ್ರಗಳ ಖರ್ಚು ವೆಚ್ಚಗಳ ಮೇಲೆ ನಿಗಾ ಇಡಲಿದ್ದಾರೆ.

ಇವರು ಹುಬ್ಬಳ್ಳಿಯ ಸರ್ಕ್ಯೂಟ್ ಹೌಸ್ನ ಹೊಸ ವಿವಿಐಪಿ ಕೊಠಡಿ ನಂ.3 ರಲ್ಲಿ ವಾಸ್ತವ್ಯ ಮಾಡಿರುತ್ತಾರೆ. ವೀಕ್ಷಕರನ್ನು 9141056512 ಮೊಬೈಲ್ ಇಲ್ಲವೇ ಇಮೇಲ್ ವಿಳಾಸ 11pc-exp2010@gmail.com ಫ್ಯಾಕ್ಸ: 0836–2000630 ಮೂಲಕ ಸಂಪರ್ಕಿಸಬಹುದು.

ಐ.ಆರ್.ಎಸ್ ಅಧಿಕಾರಿ ಭೂಷಣ್ ಪಾಟೀಲ ಅವರು 70–ಕುಂದಗೋಳ, 72–ಹುಬ್ಬಳ್ಳಿ–ಧಾರವಾಡ (ಪೂರ್ವ), 75–ಕಲಘಟಗಿ ಮತ್ತು 83–ಶಿಗ್ಗಾಂವ್ ವಿಧಾನಸಭಾ ಕ್ಷೇತ್ರಗಳ ಖರ್ಚು ವೆಚ್ಚಗಳ ಮೇಲೆ ನಿಗಾ ಇಡಲಿದ್ದಾರೆ. ಇವರು ಹುಬ್ಬಳ್ಳಿಯ ಸರ್ಕ್ಯೂಟ್ ಹೌಸ್ನ ಹೊಸ ವಿವಿಐಪಿ ಕೊಠಡಿ ನಂ.2 ರಲ್ಲಿ ವಾಸ್ತವ್ಯ ಮಾಡಿರುತ್ತಾರೆ. ವೀಕ್ಷಕರನ್ನು 9141056511 ಮೊಬೈಲ್ ಇಲ್ಲವೇ ಇಮೇಲ್ ವಿಳಾಸ 11pcexp2014@gmail.co ಫ್ಯಾಕ್ಸ: 0836–2000618 ಮೂಲಕ ಸಂಪರ್ಕಿಸಬಹುದು.

ಸಾರ್ವಜನಿಕರು ಚುನಾವಣಾ ಖರ್ಚು ವೆಚ್ಚಗಳ ಕುರಿತು ದೂರು, ಮಾಹಿತಿ ನೀಡಲು ವೆಚ್ಚ ವೀಕ್ಷಕರನ್ನು ಪ್ರತಿದಿನ ಬೆಳಿಗ್ಗೆ 10 ಗಂಟೆಯಿಂದ 11 ಗಂಟೆ ಅವಧಿಯೊಳಗೆ ಭೇಟಿ ಮಾಡಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ಜಿ.ಆರ್.ಜೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಷೇತ್ರಾದ್ಯಂತ ಕಾಂಗ್ರೆಸ್‌ಗೆ ಉತ್ತಮ ಜನ ಬೆಂಬಲ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರೊಂದಿಗೆ ಚರ್ಚೆ ನಡೆಸಿದ ಜಿಲ್ಲಾ ಘಟಕದ ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘ



ಬೆಳಗಾವಿ: ಗೋಕಾಕ ನಗರದ ಹಿಲ್ ಗಾರ್ಡನ್ ಗೃಹ ಕಚೇರಿಯಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬೆಳಗಾವಿಯ ಜಿಲ್ಲಾ ಘಟಕದ ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘ ಪದಾಧಿಕಾರಿಗಳು ಸಂಘದ ಸದಸ್ಯರು ಹಾಗೂ ಕಾರ್ಯಕರ್ತರೊಂದಿಗೆ ಭೇಟಿ ನೀಡಿ ಚರ್ಚೆ ನಡೆಸಿದರು.

ಈ ವೇಳೆ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ, ಯಾವ ಪಕ್ಷ ಹೆಚ್ಚು ಬಡವರ ಪರವಾಗಿ ಕೆಲಸ ಮಾಡಿದೆ ಅವರಿಗೆ ಮತದಾನ ಮಾಡಿ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ 10 ವರ್ಷದಿಂದ ಏನು ಕೆಲಸ ಮಾಡಿದ್ದಾರೆ ಎಂಬುದನ್ನು ಗಮನದಲ್ಲಿ ಇಟ್ಟುಕೊಂಡು ಮತ ನೀಡಿ ಎಂದ ಅವರು, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಒಂಬತ್ತು ತಿಂಗಳ ಒಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿಧ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ. ಆದ್ದರಿಂದ ಈ ಭಾರಿ ಜಿಲ್ಲಾ ಘಟಕದ ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನನಗೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ರಾಜ್ಯ ಮತ್ತು ರಾಷ್ಟ್ರದಲ್ಲಿ ಕಾಂಗ್ರೆಸ್ ಮಾಡಿದ ಸಾಧನೆ, ಜಾರಿಗೆ ತಂದಿರುವ ವಿವಿಧ ಯೋಜನೆ ಮತ್ತು ನಮ್ಮ ಪಕ್ಷ ಮಾಡಿರುವ ಅಭಿವೃದ್ಧಿ ಯೋಜನೆಗಳನ್ನು ಜನರು ಮುಕ್ತಕಂಠದಿಂದ ಪ್ರಶಂಸಿಸುತ್ತಿದ್ದಾರೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದಾದ್ಯಂತ ನನಗೆ ಉತ್ತಮ ಬೆಂಬಲ ವ್ಯಕ್ತವಾಗುತ್ತಿದೆ. ಅಲ್ಲದೆ ಎಲ್ಲ ಕಡೆ ಕಾರ್ಯಕರ್ತರ ಸಭೆ ಪೂರ್ಣಗೊಂಡಿದೆ. ಜಿಲ್ಲಾ ಪಂಚಾಯಿತಿ ಕ್ಷೇತ್ರವಾರು ಮತ್ತು ಅನೇಕ ಕಡೆ ಹೋಬಳಿ ಮಟ್ಟದಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸಲಾಗಿದೆ. ಹೋದಲ್ಲೆಲ್ಲ ಜನರಿಂದ ನಿರೀಕ್ಷೆಗೂ ಮೀರಿ ಬೆಂಬಲ ವ್ಯಕ್ತವಾಗುತ್ತಿದೆ ಎಂದು ಹೇಳಿದರು.

ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಜಿಲ್ಲಾ ಘಟಕದ ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘ ಪದಾಧಿಕಾರಿಗಳು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಬೆಳಗಾವಿಯ ಜಿಲ್ಲಾ ಘಟಕದ ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘ ಪದಾಧಿಕಾರಿಗಳು ಸಂಘದ ಸದಸ್ಯರು ಹಾಗೂ ಮುಖಂಡರು–ಕಾರ್ಯಕರ್ತರು ಇದ್ದರು.

# ಈಶ್ವರಪ್ಪಗೆ ಡೆಡ್ ಲೈನ್ ಕೊಟ್ಟ ಕಮಲ ಪಡೆ



ಬೆಂಗಳೂರು: ಲೋಕಸಭಾ ಚುನಾವಣೆಗೆ ಪುತ್ರಿನಿಗೆ ಹಾವೇರಿಯಿಂದ ಟಿಕೆಟ್ ಕೈ ತಪ್ಪಿದ ಹಿನ್ನೆಲೆ ಮಾಜಿ ಡಿಸಿಎಂ ಕೆ ಎಸ್ ಈಶ್ವರಪ್ಪ ಅವರು ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರ ವಿರುದ್ಧ ತೊಡೆತಟ್ಟಿದ್ದು, ಶಿವಮೊಗ್ಗದಿಂದ ಪಕ್ಷೇತ್ತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ.

ಹೌದು, ಶಿವಮೊಗ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಿ ವೈ ರಾಘವೇಂದ್ರ ಅವರ ವಿರುದ್ಧ ಸ್ಪರ್ಧೆ ನಡೆಸಿರುವ ಮಾಜಿ ಸಚಿವ ಕೆ ಎಸ್ ಈಶ್ವರಪ್ಪ ಅವರು ಸ್ವಪಕ್ಷದ ನಾಯಕರ ವಿರುದ್ಧ ಬಂಡಾಯದ ಬಾವುಟ ಹಾರಿದ್ದಾರೆ. ಮಾಜಿ ಸಿಎಂ ಬಿ ಎಸ್ ಯಡಿಯೂರಪ್ಪ ಕುಟುಂಬದಿಂದ ಬಿಜೆಪಿಯನ್ನು ಮುಕ್ತಗೊಳಿಸಬೇಕು ಎಂದು ಪಣ–ತೊಟ್ಟಿರುವ ಕೆ ಎಸ್ ಈಶ್ವರಪ್ಪ ಕಳೆದ ವಾರ ತಮ್ಮ ನಾಮಪತ್ರವನ್ನೂ ಸಲ್ಲಿಕೆ ಮಾಡಿದ್ದರು. ಅಲ್ಲದೇ ಕೆ ಎಸ್ ಈಶ್ವರಪ್ಪ ಅವರು ಸ್ಪರ್ಧೆಯಿಂದ ಹಿಂದೆ ಸರಿಯುವಂತೆ ಹಲವು ಬಿಜೆಪಿ ನಾಯಕರು ಮನವೊಲಿಸಿದ್ರು. ಆದರೆ, ಸಹ ನಾಮಪತ್ರವನ್ನೂ ಸಲ್ಲಿಕೆ ಮಾಡಿರುವ ಕೆ ಎಸ್ ಈಶವರಪ್ಪ ಅವರಿಗೆ ಇದೀಗ ಡೆಡ್ ಲೈನ್ ನೀಡಿದ್ದಾರೆ.

ಮುಂದಿನ ದಿನಗಳಲ್ಲಿ ಹಿರಿಯ ನಾಯಕರಾದ ಕೆ ಎಸ್ ಈಶ್ವರಪ್ಪ ನಾಮಪತ್ರ ವಾಪಸ್ ಪಡೆಯಲಿದ್ದಾರೆ ಎಂದು ಬಿಜೆಪಿ ಅಭ್ಯರ್ಥಿ ಬಿ ವೈ ರಾಘವೇಂದ್ರ ಅವರು ಹೇಳಿಕೆ ನೀಡಿದ್ದರು.

ಇದರ ಬೆನ್ನಲ್ಲೇ ಬ್ರಹ್ಮನೇ ಬಂದು ಹೇಳಿದರೂ ನಾನು ನಾಮಪತ್ರ ವಾಪಸ್ ಪಡೆಯುವುದಿಲ್ಲ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಕುರುಬ ನಾಯಕ ಕೆ ಎಸ್ ಈಶ್ವರಪ್ಪ ಹೇಳಿದ್ದು, ಯಡಿಯೂರಪ್ಪ ಹಾಗೂ ವಿಜಯೇಂದ್ರ ವಿರುದ್ಧ ಬಹಿರಂಗವಾಗಿ ವಾಗ್ದಾಳಿ ನಡೆಸಿದ್ದರು.

ರಾಜ್ಯಕ್ಕೆ ಅಮಿತ್ ಶಾ ಬಂದ ಹೋದ ಬಳಿಕ ಈಶ್ವರಪ್ಪರಿಗೆ ಹೈಕಮಾಂಡ್ ದೆಹಲಿಗೆ ಬರುವಂತೆ ಬುಲಾವ್ ನೀಡಿತ್ತು. ಆದರೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಈಶ್ವರಪ್ಪರ ಭೇಟಿಗೆ ಅವಕಾಶ ನೀಡದ ಹಿನ್ನೆಲೆಯಲ್ಲಿ ಬೇಸರದಿಂದ ಬಂದಿದ್ದ ಈಶ್ವರಪ್ಪ ನಂತರ ನಾನು ಶಿವಮೊಗ್ಗದಿಂದ ಸ್ಪರ್ಧಿಸುತ್ತೇನೆ ಎಂದು ಹೇಳಿದ್ರು, ಇದೀಗ ಮಾಜಿ ಸಿಎಂ ಬಿ ಎಸ್ ಯಡಿಯೂರಪ್ಪ ಅವರ ತವರು ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರು ತೀವ್ರ ಗೊಂದಲದಲ್ಲಿದ್ದು, ಈಶ್ವರಪ್ಪ ಅವರನ್ನ ಮನವೊಲಿಸುವ ಹಲವು ತಂತ್ರಗಳು ವಿಫಲವಾಗಿದೆ.

ಇತ್ತ ಶಿವಮೊಗ್ಗದಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತೇನೆ. ನನ್ನ ಬೆಂಬಲ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎಂದು ಹೇಳುವ ಮೂಲಕ ಯಡಿಯೂರಪ್ಪ ವಿರುದ್ಧ ತಿರುಗಿ ಬಿದ್ದಿರುವ ಈಶ್ವರಪ್ಪ ಅವರನ್ನ ಮನವೊಲಿಕೆ ಮಾಡುವ ಕೆಲಸವನ್ನು ಬಿಜೆಪಿ ಹೈಕಮಾಂಡ್ ಕೈಬಿಟ್ಟಿದೆ. ಅಲ್ಲದೆ ಕಾದು ನೋಡುವ ತಂತ್ರ ಅನುಸರಿಸುತ್ತಿದ್ದು ಏಪ್ರಿಲ್ 22ರೊಳಗೆ ಈಶ್ವರಪ್ಪ ನಾಮಪತ್ರ ವಾಪಸ್ ಪಡೆಯದಿದ್ದರೆ ಅವರನ್ನು ಪಕ್ಷದಿಂದ ಉಚ್ಚಾಟಿಸುವ ಕ್ರಮಕ್ಕೆ ಬಿಜೆಪಿ ಹೈಕಮಾಂಡ್ ಮುಂದಾಗಲಿದೆ ಎಂದು ಹೇಳಲಾಗುತ್ತಿದೆ.

# ಚುನಾವಣಾ ಅಧಿಕಾರಿಗಳಿಂದ ಭರ್ಜರಿ ಬೇಟೆ: 5.20 ಲಕ್ಷ ನಗದು, 302 ಕುಕ್ಕರ್ ವಶಕ್ಕೆ

ಬೆಂಗಳೂರು: ಲೋಕಸಭಾ ಚುನಾವಣೆ ಹೊತ್ತಲ್ಲಿ ಚುನಾವಣಾ ಅಧಿಕಾರಿಗಳಿಂದ ಭರ್ಜರಿ ಬೇಟೆ ನಡೆಯುತ್ತಿದೆ. ರಾಜಧಾನಿಯ ಎರಡು ಪ್ರತ್ಯೇಕ ಕಡೆಗಳಲ್ಲಿ ಲಕ್ಷಾಂತರ ರೂ. ಹಣ ಮತ್ತು ನೂರಾರು ಕುಕ್ಕರ್ ವಶಕ್ಕೆ ಪಡೆಯಲಾಗಿದೆ.




ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಜಿಗಣಿ ಬನ್ನೇರುಘಟ್ಟ ಮುಖ್ಯ ರಸ್ತೆಯ ಕೊಪ್ಪ ಚೆಕ್‌ಪೋಸ್ಟ್ ಬಳಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 5.20 ಲಕ್ಷ ರೂ. ಹಣವನ್ನು ಚುನಾವಣಾಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ನಿನ್ನೆ ಚುನಾವಣೆ ಅಧಿಕಾರಿಗಳು ತಪಾಸಣೆ ಮಾಡುತ್ತಿದ್ದರು. ಮಧು ಎಂಬವರು ಬ್ಯಾಂಕ್‌ನಿಂದ ಡ್ರಾ ಮಾಡಿ ಹಣ ತೆಗೆದುಕೊಂಡು ಹೋಗುತ್ತಿದ್ದರು. ಅತ್ತಿಬೆಲೆಯ ಜೆ.ಕೆ ಇಂಡಸ್ಟ್ರೀಸ್‌ಗೆ ತೆಗೆದುಕೊಂಡು ಹೋಗುತ್ತಿದ್ದ ಹಣ ಎನ್ನಲಾಗಿದೆ. ಚುನಾವಣೆ ಚೆಕ್‌ಪೋಸ್ಟ್‌ನಲ್ಲಿ ತಪಾಸಣೆ ಮಾಡುತ್ತಿದ್ದ ವೇಳೆ ಬೈಕ್‌ನಲ್ಲಿ ಹಣ ಇತ್ತು. ಹಣಕ್ಕೆ ಸೂಕ್ತ ದಾಖಲೆ ನೀಡಿದ ಹಿನ್ನೆಲೆ ವಶಕ್ಕೆ ಪಡೆಯಲಾಗಿದೆ. ಜಿಗಣಿ ಪೊಲೀಸರು ಹಾಗೂ ಚುನಾವಣಾ ಅಧಿಕಾರಿಗಳು ಹಣವನ್ನು ಸೀಜ್ ಮಾಡಿದ್ದಾರೆ.

ಮತ್ತೊಂದೆಡೆ, ಚುನಾವಣೆ ಅಧಿಕಾರಿಗಳು ಕಾರ್ಯಚರಣೆ ನಡೆಸಿ ಲೋಕಸಭಾ ಚುನಾವಣೆಯಲ್ಲಿ ಮತದಾರರಿಗೆ ಹಂಚಲು ಸಾಗಿಸುತ್ತಿದ್ದ ಕುಕ್ಕರ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ನೆಲಮಂಗಲದ ಜಾಸ್ ಟೋಲ್ ಚೆಕ್‌ಪೋಸ್ಟ್‌ನಲ್ಲಿ 302 ಕುಕ್ಕರ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ವಸ್ತುಗಳನ್ನು ಬೆಂಗಳೂರಿನಿಂದ ಹುಬ್ಬಳ್ಳಿಗೆ ಕ್ಯಾಂಟರ್ ವಾಹನ ಮೂಲಕ ಸಾಗಿಸಲಾಗುತ್ತಿತ್ತು. ಚಾಲಕ ಈರಣ್ಣ ಎಂಬಾತನನ್ನು ಪೊಲೀಸರು ವಿಚಾರಣೆ ನಡೆಸಿ, ಸುಮಾರು 4 ಲಕ್ಷ ರೂ. ಮೌಲ್ಯದ ಕುಕ್ಕರ್ ವಶಪಡಿಸಿಕೊಂಡಿದ್ದಾರೆ. ನೆಲಮಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರೀತಿ ನೆಪದಲ್ಲಿ ದೈಹಿಕ ಸಂಪರ್ಕ ಬೆಳೆಸಿ ಪ್ರಿಯಕರನಿಂದ ವಂಚನೆ

ಬೆಂಗಳೂರು: ಮದುವೆ ಆಗುವುದಾಗಿ ನಂಬಿಸಿ ಸಹಜೀವನ ನಡೆಸಿ ಹಲವು ಬಾರಿ ದೈಹಿಕ ಸಂಪರ್ಕ ಬೆಳೆಸಿ ವಂಚಿಸಿದ್ದಾನೆ ಎಂದು ಆರೋಪಿಸಿ ಯುವಕನ ವಿರುದ್ಧ ಮಹಿಳಾ ಟೆಕಿ ಬಂಡೇಪಾಳ್ಯ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.



ಬೊಮ್ಮನಹಳ್ಳಿಯ ಹೊಸಪಾಳ್ಯ ನಿವಾಸಿ 27 ವರ್ಷದ ಸಂತ್ರಸ್ತೆ ನೀಡಿದ ದೂರಿನ ಮೇರೆಗೆ ಪೊಲೀಸರು ಉತ್ತರ ಪ್ರದೇಶ ಮೂಲದ ಆದಿತ್ಯನಾಥ್ ಸಿಂಗ್ (26) ಎಂಬಾತನ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.


ಪ್ರಕರಣದ ವಿವರ: ಉತ್ತರ ಭಾರತ ಮೂಲದ ಸಂತ್ರಸ್ತೆ ಕೆಲ ವರ್ಷಗಳ ಹಿಂದೆ ಉದ್ಯೋಗ ನಿಮಿತ್ತ ಬೆಂಗಳೂರಿಗೆ ಬಂದು ಸಾಫ್ಟ್‌ವೇರ್ ಕಂಪನಿಯಲ್ಲಿ ಕೆಲಸ ಮಾಡಿಕೊಂಡಿದ್ದಾರೆ. ಆರೋಪಿ ಆದಿತ್ಯ ಸಿಂಗ್ ಕಳೆದ ಮೂರ್ನಾಲ್ಕು ವರ್ಷಗಳಿಂದ ಸಾಫ್ಟ್‌ವೇರ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾನೆ.

ಈ ನಡುವೆ 2022ರ ಜುಲೈನಲ್ಲಿ ಜಿಮ್‌ವೊಂದರಲ್ಲಿ ಸಂತ್ರಸ್ತೆ ಮತ್ತು ಆದಿತ್ಯ ಸಿಂಗ್ ಪರಸ್ಪರ ಪರಿಚಿತರಾಗಿ ಬಳಿಕ ಸ್ನೇಹ ಬೆಳೆದು ಪ್ರೀತಿಸಲು ಆರಂಭಿಸಿದ್ದಾರೆ. ಈ ವೇಳೆ ಆರೋಪಿಯು ಮದುವೆ ಆಗುವುದಾಗಿ ನಂಬಿಸಿದ್ದಾನೆ. 2022ರ ನವೆಂಬರ್‌ನಿಂದ ಇಬ್ಬರೂ ಒಂದೇ ಮನೆಯಲ್ಲಿ ಸಹಜೀವನ ನಡೆಸಲು ಪ್ರಾರಂಭಿಸಿದ್ದಾರೆ. ನಂತರ ಆರೋಪಿಯು ಸಂತ್ರಸ್ತೆ ಜತೆಗೆ ಹಲವು ಬಾರಿ ದೈಹಿಕ ಸಂಪರ್ಕ ಬೆಳೆಸಿದ್ದಾನೆ. 2023ರ ಜುಲೈ ಬಳಿಕ ಆರೋಪಿಯು ವಿನಾಕಾರಣ ಸಂತ್ರಸ್ತೆಯಿಂದ ಅಂತರ ಕಾಯ್ದುಕೊಂಡಿದ್ದಾನೆ.

ಸಂತ್ರಸ್ತೆ ಹಲವು ಬಾರಿ ಸಂಪರ್ಕಿಸಲು ಪ್ರಯತ್ನಿಸಿದರೂ ಸಿಕ್ಕಿಲ್ಲ. 2023ರ ಆಗಸ್ಟ್‌ನಲ್ಲಿ ಸಂತ್ರಸ್ತೆಗೆ ಸಿಕ್ಕಿದ ಆರೋಪಿ ಆದಿತ್ಯ ಸಿಂಗ್, ಕ್ಷುಲ್ಲಕ ಕಾರಣಗಳಿಗೆ ಸಂತ್ರಸ್ತೆ ಜತೆಗೆ ಜಗಳ ತೆಗೆದು ಅವಾಚ್ಯ ಶಬ್ಧಗಳಿಂದ ನಿಂದಿಸಿ ದೈಹಿಕ ಹಲ್ಲೆ ಮಾಡಿದ್ದಾನೆ. ಕೆಲ ತಿಂಗಳ ಬಳಿಕ ಮತ್ತೆ ಸಂತ್ರಸ್ತೆಯನ್ನು ಸಂಪರ್ಕಿಸಿರುವ ಆರೋಪಿಯು ಹಿಂದಿನ ಘಟನೆಗಳನ್ನು ಮರೆಯುವಂತೆ ಹೇಳಿದ್ದಾನೆ. ಮದುವೆ ಆಗುವುದಾಗಿ ಮತ್ತೆ ನಂಬಿಸಿ ಸಂತ್ರಸ್ತೆ ಜತೆಗೆ ದೈಹಿಕ ಸಂಪರ್ಕ ಬೆಳೆಸಿದ್ದಾನೆ. ಇತ್ತೀಚೆಗೆ ಸಂತ್ರಸ್ತೆ ಮದುವೆ ಆಗುವಂತೆ ಒತ್ತಾಯಿಸಿದಾಗ ಮತ್ತೆ ಅಂತರ ಕಾಯ್ದುಕೊಳ್ಳಲು ಮುಂದಾಗಿದ್ದಾನೆ. ಇದನ್ನು ಪ್ರಶ್ನಿಸಿದ ಸಂತ್ರಸ್ತೆಯ ಮೇಲೆ ಹಲ್ಲೆಗೈದು ಚಾಕುವಿನಿಂದ ಕೊಲೆಗೆ ಯತ್ನಿಸಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಸಂತ್ರಸ್ತೆಗೆ ಈ ಹಿಂದೆ ಬೇರೆ ವ್ಯಕ್ತಿಯ ಜತೆಗೆ ಮದುವೆಯಾಗಿದ್ದು, ಪತಿಯಿಂದ ದೂರವಾಗಿದ್ದಾರೆ. ಈ ವಿಚಾರ ಪ್ರಿಯಕರ ಆದಿತ್ಯ ಸಿಂಗ್‌ಗೆ ಗೊತ್ತಾಗಿ ಸಂತ್ರಸ್ತೆಯಿಂದ ಅಂತರ ಕಾಯ್ದುಕೊಂಡಿದ್ದ ಎನ್ನಲಾಗಿದೆ. ಈ ಸಂಬಂಧ ಆರೋಪಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಆಯಸ್ಸು ವೃದ್ಧಿಗಾಗಿ ನಗೋಣ, ಇತರರನ್ನು ನಗಿಸೋಣ



ಚಾರ್ಲಿ ಚಾಪ್ಲಿನ್ ಲೋಕವನ್ನು ಪ್ರಭಾವಿಸಿದ ಮಹಾನ್ ಕಲಾವಿದ. ಇಂದು ಈ ಅಮರ ಕಲಾವಿದನ ಸಂಸ್ಮರಣೆ ದಿನ. ಚಾರ್ಲಿ ಚಾಪ್ಲಿನ್ 1889ರ ಏಪ್ರಿಲ್ 16 ರಂದು ಜನಿಸಿದ. ಚಾರ್ಲಿ ಚಾಪ್ಲಿನ್ ಹುಟ್ಟಿದ್ದು ವಾಲ್ ವರ್ತ್ ಎಂಬ ಲಂಡನ್ನಿನ ಸಮೀಪದ ಊರಿನಲ್ಲಿ. ಎಂಬತ್ತೆಂಟು ವರ್ಷ ಬದುಕಿ 1977 ರ ಕ್ರಿಸ್ಮಸ್ ದಿನದಂದು ಸ್ವಿಟ್ಸರ್ಲೆಂಡಿನಲ್ಲಿ ನಿಧನನಾದ. ಚಾಪ್ಲಿನ್ ಚಿತ್ರಗಳನ್ನು ಆಸ್ವಾದಿಸಿದ ನಮಗೆ ಚಾಪ್ಲಿನ್ನನಷ್ಟ ಆತ್ಮೀಯರು ಮತ್ತೊಬ್ಬರಿದ್ದಾರೆಯೇ ಎನಿಸುತ್ತದೆ. ಇಡೀ ವಿಶ್ವಕ್ಕೆ ಸಂತೋಷ ಕೊಟ್ಟ ಅಪರೂಪದ ವ್ಯಕ್ತಿ ಆತ. ಚಾಪ್ಲಿನ್ನನಿಗೆ ಹೇಳಬೇಕೆನಿಸುತ್ತಿದೆ "ಚಾಪ್ಲಿನ್ ನೀನು ಯಾವ ಲೋಕದಲ್ಲಿದ್ದರೂ ಅಲ್ಲಿನ ಜನರನ್ನು ಸಂತೋಷವಾಗಿ ಇಟ್ಟಿರುವೆ" ಎಂದು.

'ಟಿಂಗ್, ಟಿಂಗ್, ಟಿಂಗ್, ಟಿಂಗ್' ಅಂತ ಆತ ನಡೆಯುವುದೇ ಖುಷಿ. ಆತನಷ್ಟು ಬಡತನಕ್ಕೆ ವೈಭವ ತಂದವರು ಉಂಟೆ. ಆತನ ಕಿತ್ತು ಹೋಗಿರುವ ಶೂ, ಕೊಳೆ ತುಂಬಿದ ಹಳೆ ಕೋಟು, ತಲೆಯ ಮೇಲಿನ ಹ್ಯಾಟು, ಕಾಲಿಗೆ ಚಕ್ರ ಕಟ್ಟಿಕೊಂಡು ಸ್ಕೇಟಿಂಗ್ ಮೂಲಕ ಚಿನಕುರುಳಿಯಂತೆ ಅಡ್ಡಾಡುವ ವೈಭವ, ಹುಡುಗಿಯನ್ನು ಪ್ರೇಮಿಸುವ ಪರಿ, ದಡಿಯನನ್ನು ಪೇಚಿಗೆ ಸಿಕ್ಕಿಸುವ ರೀತಿ, ಸಿಕ್ಕಿದವರನ್ನೆಲ್ಲ ತನ್ನ ಕೋಲಿನಲ್ಲಿ ಕುಟ್ಟಿ ಬೀಳಿಸುವ ಚೇಷ್ಟೆ, ಒಂದೇ ಎರಡೇ, ವಾವ್ ಚಾಪ್ಲಿನ್ ವಾವ್....

ಅದೂ ಆತ ಜನರನ್ನು ನಗಿಸಿದ್ದು ಯಾವ ಕಾಲದಲ್ಲಿ. ವಿಶ್ವ ಎರಡು ಯುದ್ಧಗಳಲ್ಲಿ ನಲುಗಿದ್ದ ಕಾಲದಲ್ಲಿ. ಇಡೀ ವಿಶ್ವ ಆರ್ಥಿಕ ಸಂಕಟಗಳ ಸಂಕೋಲೆಗಳಲ್ಲಿ ನಲುಗಿದ್ದ ಕಾಲದಲ್ಲಿ. ಆತನ ವಿಡಂಭನೆಗಳ ಧೈರ್ಯವಾದರೂ ಎಂತದ್ದು. 'ಹಿಟ್ಲರ್' ಅಂತಹವನ್ನು 'ದಿ ಗ್ರೇಟ್ ಡಿಕ್ಟೇಟರ್' ಚಿತ್ರದ ಮೂಲಕ ಮೂರ್ಖನನ್ನಾಗಿ ಚಿತ್ರಿಸುವ ಆತನ ಅಂದಿನ ಧೈರ್ಯ ಎಷ್ಟಿರಬೇಡ! ಹಿಟ್ಲರನ ಬದಲಿಗೆ ಆತನದೇ ತದ್ರೂಪಿಯಾದ ಸಾಮಾನ್ಯನಾಗಿ ನಿಂತು 'ಡೆಮಾಕ್ರಸಿ' ಎಂದು ಉದ್ಘೋಷಿಸುವ ಆತನ ಹಿರೀತನ ಸಾಟಿಯಿಲ್ಲದ್ದು.

ಇನ್ನೊಂದು ದೃಶ್ಯದಲ್ಲಿ, ಯುದ್ಧದ ಪಯಣದಲ್ಲಿ ಆತ ಹಸಿವಿನಿಂದ ಆತನ ಸಹ ಸೈನಿಕನ ಬೂಟನ್ನು ಸುಟ್ಟು ತಿನ್ನುವ ದೃಶ್ಯ ನಗುವಿನೊಂದಿಗೆ ಕಣ್ಣೀರನ್ನು ತರುತ್ತದೆ. ಜೊತೆಗೆ ಯುದ್ಧಗಳು ಮಾನವನ ಬದುಕಿನಲ್ಲಿ ಮೂಡಿಸಿದ ಕರಾಳತೆಯ ಛಾಯೆಯನ್ನು ಚಾಪ್ಲಿನ್ ಚಿತ್ರಗಳು ಇನ್ನಿಲ್ಲದಂತೆ ತೋರುತ್ತವೆ.


**–ಎನ್.ಎನ್.ಕಬ್ಬೂರ**
**ಶಿಕ್ಷಕರು ತಾ–ಸವದತ್ತಿ**
**ಜಿ–ಬೆಳಗಾವಿ**

ಒಂದು ಚಿತ್ರದಲ್ಲಿ ಆತ ಜೈಲಿನ ಕೈದಿ ಆಗಿದ್ದಾಗ ಒಮ್ಮೆ ಊಟ ಮುಗಿಸಿ ಟಾಯ್ಲೆಟ್ಟಿಗೆ ಹೋಗಿ ಹಿಂದಿರುಗಿ ಬರುವಾಗ ಜೈಲಿನ ಗೇಟ್ ಮುಚ್ಚಿ ಬಿಟ್ಟಿರುತ್ತಾರೆ. ಆಗ ಈತ ಬಾಗಿಲನ್ನು ತೆರೆಯುವ ರಭಸಕ್ಕೆ ಜೈಲಿನಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದ ಕಳ್ಳರ ಮುಖ ಮುರಿದು ಅವರೆಲ್ಲ ಪುನಃ ಸಿಕ್ಕಿ ಬೀಳುತ್ತಾರೆ. ಅದನ್ನು ಶ್ಲಾಘಿಸಿ ಜೈಲಿನ ಅಧಿಕಾರಿಗಳು ಚಾಪ್ಲಿನ್ ಅನ್ನು ಜೈಲಿನಿಂದ ಬಿಡುಗಡೆ ಮಾಡುತ್ತಾರೆ. ಆಗ ಜೀವನದಲ್ಲಿ ಏನು ಮಾಡಬೇಕೆಂದು ಗೊತ್ತಿಲ್ಲದ ಆ ಮುಗ್ಧ ಚಾಪ್ಲಿನ್ ಕೇಳುತ್ತಾನೆ "ನಾನು ಹೆಚ್ಚಿನ ವರ್ಷ ಇಲ್ಲೇ ಇರಬೇಕೆಂದಿದ್ದೇನೆ. ಇದಕ್ಕೆ ಅವಕಾಶವಿಲ್ಲವೇ?" ಎನ್ನುತ್ತಾನೆ. ಆ ಅಭಿನಯದಲ್ಲಿ ಆತನ ಮುಗ್ಧ ಅಭಿನಯ ನಮ್ಮನ್ನು ಅತೀವವಾಗಿ ಸೂರೆಗೊಂಡಿದೆ.

ಅಷ್ಟು ಸೊಗಸಿನ ಅಭಿನಯವದು. ಹೊರ ಪ್ರಪಂಚದಲ್ಲಿ ಮುಗ್ಧವಾಗಿ ಬದುಕುವುದು ಎಷ್ಟು ಕಷ್ಟ ಎಂದು ಹೇಳುವ, ಇರುವ ಬದುಕನ್ನು ಯಾವುದೇ ಕೃತ್ರಿಮ ಚಿಂತನೆಗಳಿಲ್ಲದೆ ಬದುಕಬಹುದಾದ ಸೊಗಸನ್ನು ಬಣ್ಣಿಸುವ ಆತನ ಅಭಿನಯದ ಪರಿ ಎಣೆ ಇಲ್ಲದಂತದ್ದು. 'ಸಿಟಿ ಲೈಟ್ಸ್' ಚಿತ್ರದಲ್ಲಿ ಚಾಪ್ಲಿನ್ ಕಣ್ಣಿಲ್ಲದ ಹೂವು ಮಾರುವ ಹುಡುಗಿಗೆ ಸಹಾಯ ಮಾಡುವುದು; ಆಕೆಗೆ ಕಣ್ಣು ಬಂದು ಎಷ್ಟೋ ದಿನವಾದ ಮೇಲೆ ಜೈಲಿನಿಂದ ಹೊರಬಂದ ಚಾಪ್ಲಿನ್ನನನ್ನು ಆಕೆ ತಕ್ಷಣ ಗುರುತಿಸಲಾಗದಿದ್ದರೂ ಆತನ ಅನುಭೂತಿಯನ್ನು ಆಕೆ ಗುರುತಿಸುವ ಚಿತ್ರಣ ಒಂದು ಮನನೀಯ ದೃಶ್ಯಕಾವ್ಯ.

ಹೀಗೆ ಚಾರ್ಲಿ ಚಾಪ್ಲಿನ್ ಅಂದರೆ ಅದೊಂದು ಅನುಭವ. ನಮ್ಮನ್ನು ನಾವು ಮರೆಸಿಕೊಂಡು, ನಮ್ಮ ಸಂತೋಷವನ್ನು ಮೆರೆಸಿ ಬದುಕನ್ನು ಔನ್ನತ್ಯವಾಗಿಸಿಕೊಳ್ಳುವ ಸೊಬಗು. ಆತನನ್ನು ಬಹಳಷ್ಟು ಜನ ಅನುಕರಿಸಿದರು. ಇಂದೂ ಅನುಕರಿಸುತ್ತಿದ್ದಾರೆ. ಆದರೆ ಆತನ ಸಮೀಪ ಕೂಡ ಯಾರೂ ಬರಲಿಲ್ಲ. ಆದರೆ ಆತ ಕಲೆಗೆ ಕೊಟ್ಟ ಪರಂಪರೆ ಮಾತ್ರ ಅತೀ ದೊಡ್ಡದು.

ಅದು ಉಳಿದಿದೆಯೇ ಎಂದು ಹೇಳುವುದು ಮಾತ್ರ ಕಷ್ಟ. ರಾಜ್ ಕಪೂರ್, ಕಮಲಹಾಸನ್ ಮುಂತಾದ ನಟರು ಚಾಪ್ಲಿನ್ ನಟನೆಯ ಹಲವಾರು ಅಂಶಗಳನ್ನು ತಮ್ಮ ಅಭಿನಯದಲ್ಲಿ ಬಳಸಿಕೊಂಡರು. ಕನ್ನಡದಲ್ಲಿ ಯಶಸ್ವಿಯಾದ 'ಅನುರಾಗ ಸಂಗಮ' ಎಂಬ ರಮೇಶ್, ಸುಧಾರಾಣಿ, ಕುಮಾರ್ ಗೋವಿಂದ್ ನಟಿಸಿದ ಚಿತ್ರ 'ಸಿಟಿ ಲೈಟ್' ಕಥೆ ಆಧರಿಸಿದ್ದು ಎಂದು ಸಿಟಿ ಲೈಟ್ಸ್ ನೋಡಿದ್ದವರಿಗೆ ತಕ್ಷಣ ಅರ್ಥವಾಗುತ್ತದೆ.



ಚಾರ್ಲಿ ಚಾಪ್ಲಿನ್ ಈ ಲೋಕದಿಂದ ನಿರ್ಗಮಿಸಿದ್ದು 1977 ರ ಕ್ರಿಸ್ಮಸ್ ಹಬ್ಬದ ದಿನ. ಎಲ್ಲರೂ ಹಬ್ಬದ ಸಂತಸದಲ್ಲಿ ನಗುನಗುತ್ತಿರುವಾಗ ಮೆಲ್ಲಗೆ ತೆರೆಮರೆಗೆ ಸರಿದುಬಿಟ್ಟ. ಹೀಗೇ ಆಯಸ್ಸು ಉದ್ದಕ್ಕೂ ಎಲ್ಲರನ್ನು ನಟಿಸುತ್ತಿಲ್ಲ ಸಾಗಿದ ಜೀವ ಅದು. ಆದ್ದರಿಂದ ನಮ್ಮ ಆಯಸ್ಸು ವೃದ್ಧಿಗಾಗಿ ನಗೋಣ, ಇತರರನ್ನು ನಗಿಸೋಣ. ನಗೋದು ಸುಲಭವಲ್ಲ, ನಗಿಸೋದು ಸಹ ಸುಲಭವಲ್ಲ ಅಲ್ಲವೇ ಸ್ನೇಹಿತರೇ.

# ಅಸಮಾನತೆ ಕಾರಣಕರ್ತರಿಗೆ ಉತ್ತರ ಕೊಡುವ ಸಮಯ ಬಂದಿದೆ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ: ಹುಬ್ಬಳ್ಳಿ –ಧಾರವಾಡಕ್ಕೆ ಹೋಲಿಸಿದರೆ ಬೆಳಗಾವಿ ಜಿಲ್ಲೆಗೆ ಆಗಿರುವ ಅಸಮಾನತೆಗೆ ಕಾರಣರಾದವರಿಗೆ ಉತ್ತರ ಕೊಡುವ ಸಮಯ ಬಂದಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಬೆಳಗಾವಿ ಬಾರ್ ಅಸೋಸಿಯೇಷನ್ ಸಮುದಾಯ ಭವನದಲ್ಲಿ ಮಂಗಳವಾರ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಸಚಿವರು, ಬೆಳಗಾವಿ ಜಿಲ್ಲೆಗೆ ಅನ್ಯಾಯ ಮಾಡಿದವರನ್ನು ಜನತೆ ಎಂದಿಗೂ ಕ್ಷಮಿಸುವುದಿಲ್ಲ. ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗಲೇ ಏನೂ ಮಾಡದವರು ಈಗ ಬೆಳಗಾವಿಗೆ ಬಂದು ಏನು ಮಾಡಲು ಸಾಧ್ಯ ಎಂದು ಪ್ರಶ್ನಿಸಿದರು.

ಜಗದೀಶ್ ಶೆಟ್ಟರ್ ಅವರು ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಏನೂ ಮಾಡಲು ಅವರಿಂದ ಸಾಧ್ಯವಾಗಲಿಲ್ಲ. ಬದಲಾಗಿ ಹೈಕೋರ್ಟ್ ಪೀಠ, ಐಐಟಿ, ಆಕ್ಸಿಜನ್ ಸಿಲೆಂಡರ್ ವಿಷಯದಲ್ಲಿ ಅನ್ಯಾಯ ಮಾಡಿದರು. ಈಗ ಬಂದು ಏನು ಮಾಡುತ್ತಾರೆ? ಕೇವಲ ಅಧಿಕಾರದ ಹಿಂದೆ ಓಡಾಡುವ ಇಂಥ ವ್ಯಕ್ತಿ ಜಿಲ್ಲೆಗೆ ಬೇಕಾ ಎಂದು ಪ್ರಶ್ನಿಸಿದರು.

ಬಿಜೆಪಿಯಲ್ಲಿ ಅಧಿಕಾರ ಅನುಭವಿಸಿ, ಆ ಪಕ್ಷದ ಮುಖಂಡರನ್ನೇ ನಿಂದಿಸಿಕೊಂಡು ಕಾಂಗ್ರೆಸ್ ಪಕ್ಷಕ್ಕೆ ಬಂದರು. ಕೇವಲ ಮೂರು ತಿಂಗಳ ಹಿಂದಷ್ಟೇ ಬಿಜೆಪಿ ನಾಯಕರ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡುತ್ತಿದ್ದ ವ್ಯಕ್ತಿ ಇಂದು ಏಕಾಏಕಿ ಬಿಜೆಪಿ ಸೇರಿ ಮೋದಿ ಅವರನ್ನು ಪ್ರಧಾನಿ ಮಾಡಬೇಕೆಂದು ಹೇಳುತ್ತಿದ್ದಾರೆ ಎಂದು ಟೀಕಿಸಿದರು.

ದ್ವಂದ್ವ ನಿಲುವು, ಅಧಿಕಾರ ಬೇಕೇ ಬೇಕು ಎಂಬ ಹಪಾಹಪಿಯವರಿಂದ ಅಭಿವೃದ್ಧಿ ನಿರೀಕ್ಷಿಸಲು ಸಾಧ್ಯವಿಲ್ಲ. ಮುಖ್ಯಮಂತ್ರಿ ಸ್ಥಾನದಿಂದ ಇಳಿದ ಮೇಲೆ ಮಂತ್ರಿಯಾದರು. ಇವರಿಗೆ ಅಧಿಕಾರವೇ ಮುಖ್ಯ ಎಂದು ಆರೋಪಿಸಿದರು. ಪ್ರಹ್ಲಾಜ ಜೋಶಿ, ಬಸವರಾಜ ಬೊಮ್ಮಾಯಿ, ಶೋಭಾ ಕರಂದ್ಲಾಜೆ, ರಮೇಶ ಜಿಗಜಿಣಗಿ, ಜಗದೀಶ್ ಶೆಟ್ಟರ್ ಸೇರಿದಂತೆ ಡಜನ್ ಗಟ್ಟಲೆ ಬಿಜೆಪಿ ಅಭ್ಯರ್ಥಿಗಳು ಚುನಾವಣೆಗೂ ಮೊದಲೇ ಕೇಂದ್ರದಲ್ಲಿ ಮಂತ್ರಿಯಾಗುವ ಕನಸಿನಲ್ಲಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವ್ಯಂಗ್ಯವಾಡಿದರು.



ಬೆಳಗಾವಿ ಭಾವನೆಗಳ ಬಗ್ಗೆ, ಬೇಡಿಕೆಗಳ ಬಗ್ಗೆ ಇವರಿಗೇನು ಗೊತ್ತಿದೆ? ಬೆಳಗಾವಿ ಬಹಳ ವಿಭಿನ್ನವಾಗಿದೆ. ಸ್ಥಳೀಯರಿಗೆ ಗೊತ್ತಿರುತ್ತದೆ. ಬಿಜೆಪಿ ಅಭ್ಯರ್ಥಿ ಇದು ನನಗೆ ಕೊನೆಯ ಚುನಾವಣೆ ಎನ್ನುತ್ತಿದ್ದಾರೆ. ಮತ್ತೆ ಚುನಾವಣೆಗೆ ನಿಲ್ಲುವ ಬಯಕೆ ಇಲ್ಲದವರಿಗೆ ಕೆಲಸ ಮಾಡುವ ಹಸಿವಿರುವುದಿಲ್ಲ. ಅವರಿಗೆ ಕೇವಲ ಅಧಿಕಾರ ದಾಹ ಎಂದು ಹೇಳಿದರು.

ಜನರ ಮನಸ್ಸನ್ನು ಅರಿತು, ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಿದರೆ ಅವನು ಜಜನಾಯಕನಾಗಲು ಸಾಧ್ಯ. ಮೃಣಾಲ್ ಹೆಬ್ಬಾಳ್ಕರ್ ಖಂಡಿತ ಉತ್ತಮ ನಾಯಕನಾಗುತ್ತಾನೆ ಎಂದು ಸಚಿವರು ಹೇಳಿದರು.

ಲಕ್ಷ್ಮೀ ಹೆಬ್ಬಾಳಕರ್ ಖಾನಾಪುರದವರು ಎನ್ನುವ ಮುರುಗೇಶ್ ನಿರಾಣಿ ರಾಜಕೀಯ ಹೇಳಿಕೆ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ.

ನಾನು ಬೆಳಗಾವಿಯಲ್ಲೇ ಹುಟ್ಟಿ ಬೆಳೆದವಳು. ಕಳೆದ 27 ವರ್ಷದಿಂದ ಇಲ್ಲೇ ಮನೆ ಮಾಡಿ ಉಳಿದುಕೊಂಡಿದ್ದೇನೆ. ನನ್ನ ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ ಎಲ್ಲವೂ ಇಲ್ಲೆ ಇದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿರುಗೇಟು ನೀಡಿದರು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಫಿರೋಜ್ ಸೇಠ್, ಮುಂದಿನ 40 ವರ್ಷ ಮೃಣಾಲ್ ಸಂಸದನಾಗಿ ನಮ್ಮೆಲ್ಲರ ಮಾರ್ಗದರ್ಶನದಲ್ಲಿ ಕೆಲಸ ಮಾಡಲಿದ್ದಾನೆ. ಬೆಳಗಾವಿ ಅಭಿವೃದ್ಧಿಗೆ ಎಲ್ಲರೂ ಸೇರಿ ಕೆಲಸ ಮಾಡೋಣ ಎಂದು ಹೇಳಿದರು.

ಶಾಸಕ ರಾಜು ಸೇಠ್ ಮಾತನಾಡಿ, ಮೃಣಾಲ ಒಬ್ಬ ಸೌಜನ್ಯತೆ ಹೊಂದಿರುವ ವ್ಯಕ್ತಿ. ತಾಯಿಯವರ ನಿಷ್ಠೆ, ಶ್ರಮ ನೋಡಿ ಕಲಿತಿದ್ದಾನೆ. ಮುಂದೆ ಒಳ್ಳೆಯ ಸಂಸದನಾಗಿ ಕೆಲಸ ಮಾಡಲಿದ್ದಾನೆ ಎಂದರು.

ಜಗದೀಶ ಶೆಟ್ಟರ್ 2 ವರ್ಷದ ಹಿಂದೆ ಬೆಳಗಾವಿಯಿಂದ ವಿಮಾನ ಸೇವೆಗಳನ್ನೆಲ್ಲ ಹುಬ್ಬಳ್ಳಿಗೆ ಕಿತ್ತುಕೊಂಡು ಹೋಗಿದ್ದರು. ಜಿಲ್ಲೆಗೆ ಅವರಿಂದ ಸಾಕಷ್ಟು ಅನ್ಯಾಯವಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ಒಬ್ಬ ಸೈನಿಕನಂತೆ ನಾನು ಬೆಳಗಾವಿಗಾಗಿ ಲೋಕಸಭೆಯಲ್ಲಿ ಹೋರಾಟ ನಡೆಸಲಿದ್ದಾನೆ. ಜಿಲ್ಲೆಗೆ ಆಗಿರುವ ಅನ್ಯಾಯವನ್ನು ನಿವಾರಿಸಲು ಪ್ರಯತ್ನ ಮಾಡುತ್ತೇನೆ. ಒಂದು ಬಾರಿ ಅವಕಾಶ ಕೊಟ್ಟು ನೋಡಿ. ನಿಮ್ಮೆಲ್ಲರ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡುತ್ತೇನೆ ಎಂದರು.

**ಬೆಳಗಾವಿಯ ಅಭಿವೃದ್ಧಿ ವಿರೋಧಿ ಜಗದೀಶ್ ಶೆಟ್ಟರ್: ಕಿವುಡಸಣ್ಣನವರ**

ಬಿಜೆಪಿ ಅಭ್ಯರ್ಥಿ, ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ತೆಗೆದುಕೊಂಡ ಏಕಪಕ್ಷೀಯ ನಿರ್ಧಾರಗಳಿಂದ ಬೆಳಗಾವಿಯಲ್ಲಿ ವಕೀಲರ ವೃತ್ತಿಗೆ ಸಾಕಷ್ಟು ಹಿನ್ನಡೆ ಉಂಟಾಯಿತು ಎಂದು ಬೆಳಗಾವಿ ಬಾರ್ ಅಸೋಸಿಯೇಷನ್ ಅಧ್ಯಕ್ಷ ಎಸ್. ಎಸ್. ಕಿವುಡಸಣ್ಣನವರ ಆರೋಪಿಸಿದರು.

ಬೆಳಗಾವಿಗೆ ನಿಗದಿಯಾಗಿದ್ದ ಹೈಕೋರ್ಟ್ ಪೀಠವನ್ನು ಧಾರವಾಡಕ್ಕೆ ಸ್ಥಳಾಂತರಿಸಿದರು ಎಂದು ತಿಳಿಸಿದರು.

ಜಗದೀಶ್ ಶೆಟ್ಟರ್ ಅವರು ಬೆಳಗಾವಿಗೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ವೇಳೆ ಜಿಲ್ಲೆಗೆ ಸಾಕಷ್ಟು ಅನ್ಯಾಯ ಎಸಗಿದ್ದಾರೆ ಎಂದರು. ಜಿಲ್ಲೆಗೆ ಬರಬೇಕಿದ್ದ ಐಐಟಿ ಕಾಲೇಜು, ವಿಮಾನ ನಿಲ್ದಾಣ ವಿಸ್ತರಣೆಗೆ ಅಡ್ಡಿ ಪಡಿಸಿದರು ಎಂದು ಕಿವುಡಸಣ್ಣನವರ ಆರೋಪಿಸಿದರು.

ಈ ವೇಳೆ ಬಾರ್ ಅಸೋಸಿಯೇಷನ್ ಉಪಾಧ್ಯಕ್ಷ ಬಸವರಾಜ ಮುಗಳಿ, ಜಂಟಿ ಕಾರ್ಯದರ್ಶಿ ವೈ.ಕೆ.ಡಿವಟೆ, ಆರ್. ಕೆ.ಪಾಟೀಲ್, ಆರ್ಪಿ.ಪಾಟೀಲ್, ಶೀತಲ್ ರಾಮಶೆಟ್ಟಿ, ವಿನೋಧ ಪಾಟೀಲ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ವಕೀಲರು ಉಪಸ್ಥಿತರಿದ್ದರು.

# ಆರೋಗ್ಯಕರ ಆಯುಷ್ ಪಾನಕ ಪರಿಚಯ

## ಬಾಯಾರಿಕೆ ನೀಗಿಸಲು ಹುಣಸೆ ಹಣ್ಣಿನ ಪಾನಕ ಸೇವಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸಲಹೆ

ಬೆಳಗಾವಿ: ಬಿಸಿಲಿನ ಬೇಗೆ ತೀವ್ರವಾಗಿರುವುದರಿಂದ ಶರೀರದ ದಾಹ ಹಾಗೂ ಬಾಯಾರಿಕೆಯನ್ನು ನೀಗಿಸಲು ಆಯುಷ್ ಇಲಾಖೆ ಪರಿಚಯಿಸಿರುವ ಚಿಂಚಾ ಪಾನಕ(ಹುಣಸೆ ಹಣ್ಣಿನ ಪಾನಕ)ವನ್ನು ಸಾರ್ವಜನಿಕರು ಸೇವಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸಲಹೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಆವರಣದಲ್ಲಿ ಮಂಗಳವಾರ(ಏ.16) ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆಯುಷ್ ಇಲಾಖೆಯ ವತಿಯಿಂದ ಆರೋಗ್ಯಕರ ಚಿಂಚಾ ಪಾನಕ(ಹುಣಸೆ ಹಣ್ಣಿನ ಪಾನಕ)ವನ್ನು ಸಾರ್ವಜನಿಕರು ಹಾಗೂ ಕರ್ತವ್ಯನಿರತ ಕಚೇರಿಯ ಸಿಬ್ಬಂದಿಗೆ ವಿತರಿಸಿ ಮಾತನಾಡಿದರು.

ಎಲ್ಲೆಡೆ ಬಿಸಿಲಿನ ತಾಪ ಹೆಚ್ಚುತ್ತಿರುವುದರಿಂದ ಆರೋಗ್ಯ ರಕ್ಷಣೆಗೆ ದೇಹವನ್ನು ತಂಪಾಗಿಟ್ಟುಕೊಳ್ಳುವುದು ಅಗತ್ಯವಾಗಿದೆ. ಆದ್ದರಿಂದ ಹೆಚ್ಚು ಹೆಚ್ಚು ನೀರು ಕುಡಿಯುವುದರ ಜತೆಗೆ



ಆಯುಷ್ ಇಲಾಖೆಯಿಂದ ಪರಿಚಯಿಸಲಾಗುವ ಪಾನಕ ಮತ್ತಿತರರ ಪಾನೀಯ ಸೇವಿಸುವಂತೆ ತಿಳಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶ್ರೀಕಾಂತ ಸುಣಧೋಳಿ ಅವರು, ಹುಣಸೆ ಹಣ್ಣಿನ ಪಾನಕ ಸೇವನೆಯಿಂದ ಜೀರ್ಣಕ್ರಿಯೆ ಉತ್ತಮಗೊಳ್ಳುವುದರ ಜತೆಗೆ ಬಾಯಾರಿಕೆ ನಿವಾರಿಸಲಿದೆ ಎಂದರು.

ಚುನಾವಣಾ ತರಬೇತಿ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ, ಆಯುಷ್ ಇಲಾಖೆಯ ಡಾ.ಚಂದ್ರಶೇಖರ್ ಸಿದ್ಧಾಪುರ, ಡಾ.ಸುಚೇತಾ ದೇಸಾಯಿ, ವಾರ್ತಾ ಇಲಾಖೆಯ ಉಪ ನಿರ್ದೇಶಕ ಗುರುನಾಥ ಕಡಬೂರ ಹಾಗೂ ಜಿಲ್ಲಾಧಿಕಾರಿ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

ಪಾನಕ ತಯಾರಿಸುವ ವಿಧಾನ: ಪ್ರತಿದಿನ 50 ರಿಂದ 100 ಮಿ.ಲೀ. ಪಾನಕವನ್ನು ಸೇವಿಸಬಹುದು. ಹುಣಸೆ ಹಣ್ಣು(100 ಗ್ರಾಂ), ಬೆಲ್ಲದ ಪುಡಿ(400 ಗ್ರಾಂ), ಜೀರಿಗೆ ಪುಡಿ(10 ಗ್ರಾಂ), ಕಾಳು ಮೆಣಸಿನಪುಡಿ(5 ಗ್ರಾಂ) ಹಾಗೂ ಸೈಂದವ ಲವಣ(5 ಗ್ರಾಂ) ಬಳಸಿಕೊಂಡು ಪಾನಕ ತಯಾರಿಸಬಹುದು.

ಹುಣಸೆ ಹಣ್ಣು ರಾತ್ರಿಯಿಡೀ ನೆನೆಸಿಡಬೇಕು; ಮರುದಿನ ಬೆಳಿಗ್ಗೆ ಕೈಯಿಂದ ಹಿಸುಕಿ ಬಾಟಲಿಗಳಲ್ಲಿ ಸೋಸಿಟ್ಟುಕೊಂಡು ಪಾನಕ ತಯಾರಿಕೆಗೆ ಬೇಕಾದಷ್ಟು ಬಳಸಬಹುದು.

ಅಗತ್ಯ ಪ್ರಮಾಣದ ನೀರನ್ನು ಪಾತ್ರೆಗೆ ಹಾಕಿ ಹುಣಸೆ ಹಣ್ಣಿನ ಮಿಶ್ರಣವನ್ನು ಬೆರೆಸಿ ಇದರೊಂದಿಗೆ ಬೆಲ್ಲದ ಪುಡಿಯನ್ನು ಹಾಕಿ ಕರಗಿಸಬೇಕು. ಕೊನೆಯಲ್ಲಿ ನಿರ್ದಿಷ್ಟ ಪ್ರಮಾಣದಲ್ಲಿ ಜೀರಿಗೆ ಪುಡಿ, ಕಾಳುಮೆಣಸಿನ ಪುಡಿ ಮತ್ತು ಸೈಂದವ ಲವಣವನ್ನು ಸೇರಿಸಿದರೆ ಪಾನಕ ಸಿದ್ಧವಾಗುತ್ತದೆ.

# ನಾಲ್ಕು ವರ್ಷ ಸಿದ್ದರಾಮಯ್ಯ ಸಿ.ಎಂ ಆಗಿರಬೇಕು: ರಾಯರಡ್ಡಿ



ಕೊಪ್ಪಳ: ಮುಂದಿನ ನಾಲ್ಕು ವರ್ಷ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಇರಬೇಕು. ಅದಕ್ಕಾಗಿ ಕೊಪ್ಪಳ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಕೆ. ರಾಜಶೇಖರ ಹಿಟ್ನಾಳ ಅವರನ್ನು ಗೆಲ್ಲಿಸಬೇಕು ಎಂದು ಮುಖ್ಯಮಂತ್ರಿ ಅವರ ಆರ್ಥಿಕ ಸಲಹೆಗಾರರೂ ಆದ ಯಲಬುರ್ಗಾ ಶಾಸಕ ಬಸವರಾಜ ರಾಯರಡ್ಡಿ ಹೇಳಿದರು.

ಇಲ್ಲಿನ ತಾಲ್ಲೂಕು ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಲೋಕಸಭಾ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿಯಲ್ಲಿ ಇರುವುದು ಮೋದಿ ಒನ್ ಮ್ಯಾನ್ ಶೋ ಮಾತ್ರ. ಮೋದಿ ಸರ್ವಾಧಿಕಾರಿಯಾಗಿ ನಡೆದುಕೊಳ್ಳುತ್ತಿದ್ದಾರೆ ಎಂದರು.

ಸಿದ್ದರಾಮಯ್ಯ ನನ್ನ ಆತ್ಮೀಯ ಸ್ನೇಹಿತರು. ನನಗೆ ಸಚಿವ ಸ್ಥಾನದ ಆಸೆಯಿಲ್ಲ, ಸಚಿವ ಸ್ಥಾನಕ್ಕಿಂತಲೂ ಹೆಚ್ಚಿನ ಅವಕಾಶ ಪಡೆದಿದ್ದೇನೆ, ಎಲ್ಲಿಯೇ ಆಗಲಿ, ಅಭ್ಯರ್ಥಿ ಯಾರೇ ಆಗಿರಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಬೇಕು. ಸಿದ್ದರಾಮಯ್ಯ ಉಳಿದ ಅವಧಿಗೆ ಮುಖ್ಯಮಂತ್ರಿ ಆಗಿರಬೇಕು ಎಂದು ತಿಳಿಸಿದರು.

# ಮೇ 7 ರಂದು ತಪ್ಪದೇ ಮತ ಚಲಾಯಿಸಿ: ಎಡಿ ಗೋಪಾಲ ಮಾಳಿ



ಕಾಗವಾಡ: ಮೇ 7 ರಂದು ತಪ್ಪದೇ ಮತದಾನ ಮಾಡುವಂತೆ ಸಹಾಯಕ ನಿರ್ದೇಶಕ(ಗ್ರಾಉ) ಗೋಪಾಲ ಮಾಳಿ ಹೇಳಿದರು. ಕಾಗವಾಡ ತಾಲೂಕಿನ ಮಂಗಸೂಳಿ ಗ್ರಾಮದಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಮಂಗಳವಾರ ಹಮ್ಮಿಕೊಳ್ಳಲಾದ ಮತದಾನದ ಜಾಗೃತಿ ಅಭಿಯಾನದಲ್ಲಿ ಕೂಲಿಕಾರನ್ನುದ್ದೇಶಿಸಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವ ಬಲಗೊಳ್ಳಲು ಪ್ರತಿಯೊಬ್ಬರು ಮತದಾನ ಮಾಡಬೇಕು. ಮತ ಚಲಾವಣೆ ನಮ್ಮ ಹಕ್ಕು ಮತ್ತು ಕರ್ತವ್ಯವಾಗಿದ್ದು ಉತ್ತಮ ಪ್ರಜಾಪ್ರಭುತ್ವಕ್ಕಾಗಿ ಕಡ್ಡಾಯವಾಗಿ ಮತದಾನ ಮಾಡಿ ದೇಶದ ಹಬ್ಬದಲ್ಲಿ ಪಾಲ್ಗೊಳ್ಳಿ ಎಂದು ಕರೆ ನೀಡಿದರು.

ಐಇಸಿ ಸಂಯೋಜಕ ಅಮೀತ ಇಂಗಳಗಾಂವಿ ಮಾತನಾಡಿ, ಚುನಾವಣೆ ಪ್ರಜಾಪ್ರಭುತ್ವದ ಹಬ್ಬವಾಗಿದ್ದು ಪ್ರತಿಯೊಬ್ಬರೂ ಕಡ್ಡಾಯವಾಗಿ ಯಾವುದೇ ಆಸೆ ಆಮಿಷೆಗಳಿಗೆ ಬಲಿಯಾಗದೆ ಮತದಾನ ಮಾಡಬೇಕೆಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸಿಬ್ಬಂದಿಗಳಾದ ಬೀರಪ್ಪ ಸಿಂಗಾಡಿ, ಸುರೇಖಾ ಮಧಾಳೆ ಮುಂತಾದವರು ಹಾಜರಿದ್ದರು.

# ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಮೃಣಾಲ್ ಹೆಬ್ಬಾಳ್ಕರ್ ಬೆಂಬಲಿಸಿ: ಸಚಿವ ಸತೀಶ್ ಜಾರಕಿಹೊಳಿ

## ಕಂಗ್ರಾಳಿ ಗಲ್ಲಿ, ಅಲಾರವಾಡ, ಬಸವನ ಕುಡುಚಿ ಗ್ರಾಮಗಳಲ್ಲಿ ಕಾರ್ಯಕರ್ತರ ಸಮಾವೇಶ

ಬೆಳಗಾವಿ: ಕಳೆದ 11 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿರುವ ಮೃಣಾಲ್ ಹೆಬ್ಬಾಳ್ಕರ್ ಯೋಗ್ಯ ಅಭ್ಯರ್ಥಿ ಆಗಿದ್ದು, ಜನರ ನಾಡಿ ಮಿಡಿತ ಅರಿತಿದ್ದಾರೆ. ಇಂಥ ಸೂಕ್ತ ಅಭ್ಯರ್ಥಿಗೆ ಜನರು ಆಶೀರ್ವದಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಸಮಾಜ ಸೇವಕನಾಗಿ ಗುರುತಿಸಿಕೊಂಡಿರುವ ಮೃಣಾಲ್ ಜಿಲ್ಲೆಯ ಘನತೆಯನ್ನು ಎತ್ತಿಹಿಡಿಯಲಿದ್ದಾರೆ ಎಂದರು.

ಕಂಗ್ರಾಳಿ ಗಲ್ಲಿ, ಅಲಾರವಾಡ, ಬಸವನ ಕುಡುಚಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ನಡೆಸಿ




ಮಾತನಾಡಿದ ಸಚಿವರು, ನಮ್ಮೆಲ್ಲರ ಮಾರ್ಗದರ್ಶನದಲ್ಲಿ ಮೃಣಾಲ್ ಹೆಬ್ಬಾಳ್ಕರ್ ಕಾರ್ಯನಿರ್ವಹಿಸಲಿದ್ದು, ಜಿಲ್ಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸುವುದು ನಿಶ್ಚಿತ ಎಂದರು.

ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡವರ ಹಸಿವನ್ನು ನೀಗಿಸುತ್ತಿದ್ದು, ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ ಎಂದು ಸಚಿವರು ಹೇಳಿದರು. ಮೃಣಾಲ್ ಹೆಬ್ಬಾಳ್ಕರ್ ಗೆಲ್ಲಿಸುವ ಮೂಲಕ ಈ ಭಾಗದಲ್ಲಿ ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಜಿಲ್ಲೆಯ ಮನೆಮಗ ಮೃಣಾಲ್ ಹೆಬ್ಬಾಳ್ಕರ್ ಅವರಿಗೆ ಮತ ನೀಡಿ, ಜಿಲ್ಲೆಯ ಸ್ವಾಭಿಮಾನವನ್ನು ಎತ್ತಿಹಿಡಿಯಬೇಕು ಎಂದು ಕರೆ ನೀಡಿದರು. ಹೊರಗಿನ ಅಭ್ಯರ್ಥಿಯನ್ನು ತಿರಸ್ಕರಿಸಿ ನಿಮ್ಮ ಮನೆ ಮಗನನ್ನು ಗೆಲ್ಲಿಸಿ, ಜಿಲ್ಲೆಯ ಅಭಿವೃದ್ಧಿಗೆ ಹಗಲಿರುಳು ಶ್ರಮಿಸಲಿದ್ದಾನೆ ಎಂದು ಹೇಳಿದರು. ಅಲಾರವಾಡ ಗ್ರಾಮದಲ್ಲಿ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ, ಹೂವಿನ ಮಳೆಗರೆದು ಸ್ವಾಗತಿಸಲಾಯಿತು.

ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ಮುಖಂಡರಾದ ಮಲ್ಲೇಶ ಚೌಗಲೆ, ದೀಪಕ್ ಪಾಟೀಲ್, ಸಾಗರ್ ತಾಳೇಕರ್, ಗಜಾನನ ಕಡಚಿ, ಸಿದ್ದಣ್ಣನವರ್, ಅನಿಲ್ ಅನಗೋಳ, ಸತೀಶ್ ರಾಯಗೊಳ ಉಪಸ್ಥಿತರಿದ್ದರು.

# ದ್ವಾರಕೀಶ್ ಅಗಲಿಕೆ ಕನ್ನಡ ಚಿತ್ರರಂಗ ಹಾಗೂ ಕರುನಾಡಿಗೆ ತುಂಬಲಾರದ ನಷ್ಟ; ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಂಬನಿ

ಬೆಳಗಾವಿ: ಕನ್ನಡ ಚಿತ್ರರಂಗದ ಹಿರಿಯ ನಟ, ನಿರ್ದೇಶಕ, ನಿರ್ಮಾಪಕ ದ್ವಾರಕೀಶ್ ನಿಧನಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತೀವ್ರ ಸಂತಾಪ ಸೂಚಿಸಿದ್ದಾರೆ.

ನಟ, ನಿರ್ದೇಶಕ, ನಿರ್ಮಾಪಕರಾಗಿ ಕನ್ನಡ ಚಿತ್ರರಂಗಕ್ಕೆ ದ್ವಾರಕೀಶ್ ಅವರು ನೀಡಿರುವ ಕೊಡುಗೆ ಅಪಾರ. ಓರ್ವ ಮಹಾನ್ ನಟ, ಉತ್ತಮ ನಿರ್ದೇಶಕನನ್ನು ಕಳೆದೊಂಡಿದ್ದೇವೆ.

ಕನ್ನಡ ಚಿತ್ರರಂಗಕ್ಕೆ ಮಾತ್ರವಲ್ಲ, ಕರುನಾಡಿಗೆ ತುಂಬಲಾರದ ನಷ್ಟ ಎಂದು ಹೆಬ್ಬಾಳಕರ್ ಹೇಳಿದ್ದಾರೆ.

ಇಡೀ ಕನ್ನಡ ಚಿತ್ರರಂಗಕ್ಕೆ ದ್ವಾರಕೀಶ್ ಹೊಸ ಚೈತನ್ಯವನ್ನು



ತುಂಬಿದ್ದರು.

ಸೋಲು–ಗೆಲುವು ಎಲ್ಲವನ್ನೂ ಸಮಾನವಾಗಿ ಸ್ವೀಕರಿಸಿ ಬದುಕಿನ ಏರಿಳಿತಗಳ ನಡುವೆಯೂ ಒಬ್ಬ ಪ್ರಜ್ಞಾವಂತ ಹಾಸ್ಯ ಕಲಾವಿದನಾಗಿ ಜನರನ್ನು ನಗಿಸುವ, ರಂಜಿಸುವ ಕೆಲಸ ಮಾಡಿದ್ದರು. ದ್ವಾರಕೀಶ್ ಅವರ ಅಗಲಿಕೆ ತೀವ್ರ ದು:ಖವನ್ನುಂಟು ಮಾಡಿದೆ ಎಂದು ಕಂಬನಿ ಮಿಡಿದಿದ್ದಾರೆ.

ಹಿರಿಯ ಚೇತನರ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಕುಟುಂಬಕ್ಕೆ ಹಾಗೂ ಅಭಿಮಾನಿಗಳಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಸಚಿವರು ಪ್ರಾರ್ಥಿಸಿದ್ದಾರೆ.

# ದೇಶದ ಭವಿಷ್ಯಕ್ಕಾಗಿ ಮತ್ತೆ ಮೋದಿ ಪ್ರಧಾನಿಯಾಗಬೇಕು



ಕೆಂಭಾವಿ: ಪ್ರಧಾನಿ ಮೋದೀಜಿ ಅವರು ದೇಶದ ಜನತೆಗೆ ಜನಧನ, ಆಯುಷ್ಮಾನ ಭಾರತ, ಕಿಸಾನ್ ಸಮ್ಮಾನ ಸೇರಿದಂತೆ ಅನೇಕ ಜನಪರ ಯೋಜನೆಗಳನ್ನು ನೀಡಿದ್ದಾರೆ ಅವರನ್ನು ಮತ್ತೆ ಪ್ರಧಾನಿ ಮಾಡುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿಯಗಿದೆ ಎಂದು ರಾಯಚೂರು ಲೋಕಸಭಾ ಅಭ್ಯರ್ಥಿ ರಾಜಾ ಅಮರೇಶ್ವರ ನಾಯಕ ಹೇಳಿದರು.

ಪಟ್ಟಣದ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದ ಆವರಣದಲ್ಲಿ ಲೋಕ ಸಭಾ ಚುನಾವಣಾ ನಿಮಿತ್ಯ ಮಂಗಳವಾರ ಶಹಾಪೂರ ಮಂಡಲ ಬಿಜೆಪಿ ಪಕ್ಷದ ಕಾರ್ಯಕರ್ತರ ಸಭೆನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಉಜ್ವಲ ಭವಿಷ್ಯದ ದೃಷ್ಟಿಕೋನ ಇಟ್ಟುಕೊಂಡ ಚುನಾವಣೆ ಇದಾಗಿದ್ದು ಪಕ್ಷದ ಎಲ್ಲ ಕಾರ್ಯಕರ್ತರು ದೇಶದ ಉಜ್ವಲ ಭವಿಷ್ಯಕ್ಕಾಗಿ ದುಡಿಯಬೇಕು ಎಂದು ಹೇಳಿದರು.


ವಿಧಾನ ಪರಿಷತ್ ಸದಸ್ಯ ಬಿ. ಜಿ. ಪಾಟೀಲ ಮಾತನಾಡಿ, ಪಕ್ಷದ ನಿಷ್ಠಾವಂತ ಕಾರ್ಯಕರ್ತ ಹಾಗೂ ಅಭಿವೃದ್ಧಿ ಹರಿಕಾರರಾದ ರಾಜಾ ಅಮರೇಶ್ವರ ನಾಯಕರನ್ನು ಮತ್ತೆ ಆರಿಸಿ ಕಳಿಸುವ ಜವಾಬ್ದಾರಿ ಪ್ರತಿ ಕಾರ್ಯಕರ್ತರ ಮೇಲಿದೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಅಮೀನರೆಡ್ಡಿ ಪಾಟೀಲ ಯಾಳಗಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಪಂ ಮಾಜಿ ಅಧ್ಯಕ್ಷ ಬಸನಗೌಡ ಯಡಿಯಾಪೂರ, ಮುಖಂಡರಾದ ಬಸವರಾಜಗೌಡ ವಿಭೂತಿಹಳ್ಳಿ, ಗುರು ಕಾಮಾ, ಶಂಕರ ಕರಣಗಿ, ಮಲ್ಲಿಕಾರ್ಜುನ ಕಂದಕೂರ, ಕನಕಪ್ಪ ವಂದಗನೂರ, ರಾಜಶೇಖರ ಗೂಗಲ್, ಶಾಂತಣ್ಣ ಚನ್ನೂರ, ದೇವೇಂದ್ರ, ಸಂಗಣ್ಣ ತುಂಬಗಿ, ಯಲ್ಲಯ್ಯ, ನಾಯಕ, ಶರಣಪ್ಪ ಯಾಳಗಿ, ರಮೇಶ ಕೊಡಗಾನೂರ ಲಕ್ಷ್ಮೀಬಾಯಿ ಕಂಬಾರ ಸೇರಿದಂತೆ ಹಲವರು ಭಾಗವಹಿಸಿದ್ದರು. ಶರಣು ಮಂಡಗಳ್ಳಿ ಸ್ವಾಗತಿಸಿದರು, ರಮೇಶ ಜಾಧವ ನಿರೂಪಿಸಿ ವಂದಿಸಿದರು.

# ಕಾಂಗ್ರೆಸ್ ಪಕ್ಷವನ್ನು ಕೇಂದ್ರದಲ್ಲೂ ಅಧಿಕಾರಕ್ಕೆ ತರಲು ಶ್ರಮಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ನಮ್ಮ ಕಾಂಗ್ರೆಸ್ ಸರಕಾರವು ಜನರ ಭಾವನೆಗಳನ್ನು ಗೌರವಿಸುತ್ತಾ, ಅವರ ಬದುಕಿಗೆ ನೆರವಾಗುವಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಹೀಗಾಗಿ ಮುಂಬರುವ ಚಿಕ್ಕೋಡಿ ಲೋಕಸಭಾ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸುವ ಮೂಲಕ ಜನಪರ ಕಾಂಗ್ರೆಸ್ ಪಕ್ಷವನ್ನು ಕೇಂದ್ರದಲ್ಲೂ ಅಧಿಕಾರಕ್ಕೆ ತರಲು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಧ್ಯಕ್ಷ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದ ಮೋದಗಾ ಹಾಗೂ ಶೇಟ್ಟಿಹಳಿ ಗ್ರಾಮದಲ್ಲಿ ಹಮ್ಮಿಕೊಂಡಿದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ



ಅವರು ಮಾತನಾಡಿ, ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನಗೆ ನೀವೆಲ್ಲರೂ ಆಶೀರ್ವಾದ ಮಾಡಬೇಕು.

ಸ್ಥಳೀಯ ಶಾಸಕರು ಹಾಗೂ ಸಚಿವರಾದ ನಮ್ಮ ತಂದೆಯವರಾದ ಶ್ರೀ ಸತೀಶ ಜಾರಕಿಹೊಳಿ ಅವರನ್ನು ಹಾಗೂ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮೂಲಕ ಚಿಕ್ಕೋಡಿ ಲೋಕಸಭೆಯ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಹಾಗೂ ಸುವರ್ಣ ಚಿಕ್ಕೋಡಿ ಕನಸು ನನಸು ಮಾಡುತ್ತೇವೆ.

ಕಾಂಗ್ರೆಸ್ ಪಕ್ಷದ ಪಂಚ್ ಗ್ಯಾರಂಟಿಗಳನ್ನು ಜನರಿಗೆ ಮನವರಿಕೆ ಮಾಡಿಕೊಟ್ಟು ಮತದಾರರ ಮನಸ್ಸು ಗೆಲ್ಲಬೇಕು. ಮುಂದೆ ನಿಮ್ಮ ಸಹಾಯ ಸಹಕಾರ ಇರಲಿ ಎಂದು ಕಾರ್ಯಕರ್ತರಲ್ಲಿ ಮನವಿ ಮಾಡಿಕೊಡರು.

ಕಾಂಗ್ರೆಸ್ ಸದಾ ಬಡವರ ಪರವಾಗಿದ್ದು, ಚುನಾವಣೆಗೂ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ನುಡಿದಂತೆ ನಡೆದಿದೆ.

ಬಿಜೆಪಿಯವರಿಗೆ ಕೇವಲ ಶ್ರೀಮಂತ ಉದ್ಯಮಿಗಳ ಪರವಾಗಿ ಕೆಲಸ ಮಾಡುವುದು ಗೊತ್ತು. ಆದರೆ ಇಂದಿರಾ ಗಾಂಧಿ ಅವರಿಂದ ಹಿಡಿದು ಸಿದ್ದರಾಮಯ್ಯವರೆಗೆ ಕಾಂಗ್ರೆಸ್ ಪಕ್ಷದ ಎಲ್ಲರೂ ಬಡವರ ಪರ ಕೆಲಸ ಮಾಡಿದ್ದಾರೆ.

ಕ್ಷೇತ್ರದ ಜನ ಎಲ್ಲವನ್ನೂ ಗಮನಿಸುತ್ತಿದ್ದಾರೆ ಎಂದ ಅವರು, ನಮ್ಮ ಸರ್ಕಾರ ಬಡವರ ಪರವಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದೆ.

ಅಧಿಕಾರಕ್ಕೆ ಬಂದ 9 ತಿಂಗಳಲ್ಲೇ ಘೋಷಿಸಿದ್ದ ಎಲ್ಲಾ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದೆ.

ಇದು ನಮ್ಮ ಸರ್ಕಾರದ ಹೆಗ್ಗಳಿಕೆಯಾಗಿದೆ ಎಂದರು. ಇದಕ್ಕೂ ಮೊದಲು ಗ್ರಾಮಕ್ಕೆ ಆಗಮಿಸಿದ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಮಹಿಳೆಯರು ಆರತಿ ಎತ್ತಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಆಹ್ವಾನ

ಬೆಳಗಾವಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಹಾಗೂ ಮಹಿಳಾ ಕಲ್ಯಾಣ ಸಂಸ್ಥೆಯ "ನಮ್ಮೂರ ಬಾನುಲಿ" ಸಮುದಾಯ ರೇಡಿಯೋ ಕೇಂದ್ರ ಇವರ ಸಹಯೊಗದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ರೆಡಿಯೋದಲ್ಲಿ ನೀಡಲು ಆಸಕ್ತ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಾಂಸ್ಕೃತಿಕ ಕಲೆಗಳಾದ ಜನಪದ ಹಾಡು, ಗೀಗಿಪದ, ಶಹನಾಯಿ ವಾದನ, ತಬಲಾ ಬಾರಿಸುವಿಕೆ, ಮುಂತಾದ ಕಾರ್ಯಕ್ರಮಗಳನ್ನು ನೀಡಲು ಗ್ರಾಮೀಣ ಕಲಾವಿದರು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9590551177 ಸಂಪರ್ಕಿಸಿರಿ ಎಂದು ಗೌರವ ಕಾರ್ಯದರ್ಶಿಗಳು ಮಹಿಳಾ ಕಲ್ಯಾಣ ಸಂಸ್ಥೆ,ಬೆಳಗಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭ ಚುನಾವಣೆ–2024

### ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ: ನಿಯಂತ್ರಣ ಕೊಠಡಿಗೆ ವೆಚ್ಚ ವೀಕ್ಷಕರ ಅನೀರಿಕ್ಷಿತ ಭೇಟಿ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಒಟ್ಟು ಎಂಟು ವಿಧಾನಸಭಾ ಮತಕ್ಷೇತ್ರಗಳಿಗೆ ಸಂಬಂದಿಸಿದಂತೆ ಇಬ್ಬರು ವೆಚ್ಚ ವೀಕ್ಷಕರನ್ನು ನೇಮಿಸಲಾಗಿದ್ದು, ನಿಪ್ಪಾಣಿ, ಚಿಕ್ಕೋಡಿ,–ಸದಲಗಾ, ಹುಕ್ಕೇರಿ, ಯಮಕನಮರಡಿ ವಿಧಾನ ಸಭಾ ವೆಚ್ಚ ವೀಕ್ಷಕರಾದ ಐ.ಆರ್.ಎಸ್. ಅಧಿಕಾರಿ ಎನ್.ಮೋಹನ ಕೃಷ್ಣ ಅವರು ಭಾನುವಾರ (ಏ.14) ರಂದು ಸಾಯಂಕಾಲ ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾ–ರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನಿಯಂತ್ರಣ ಘಟಕಕ್ಕೆ ಅನೀ–ರಿಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಿದರು.

ನಿಯಂತ್ರಣ ಘಟಕದ ಕಾರ್ಯವೈಖರಿ ಬಗ್ಗೆ ಮಾಹಿತಿ ಪಡೆದ ವೆಚ್ಚ ವೀಕ್ಷಕರು ಚುನಾವಣಾ ಅಕ್ರಮಗಳನ್ನು ನಿಯಂತ್ರಿಸಲು ಸ್ಥಾಪಿಸಲಾಗಿರುವ ಚೆಕ್ ಪೋಸ್ಟಗಳ ಮೇಲೆ ನಿರಂತರ ನಿಗಾವಹಿಸಲು ತಿಳಿಸಿದರು.

ಅಲ್ಲದೇ ಮಾಧ್ಯಮಗಳಲ್ಲಿ ಬರುವಂತಹ ಕಾಸಿಗಾಗಿ ಸುದ್ಧಿ, ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದ ವಿಷಯಗಳು ಬಿತ್ತರವಾದಲ್ಲಿ ಕೂಡಲೇ ಮಾಹಿತಿ ಒದಗಿಸಬೇಕು. ಸಾಮಾಜಿ–ಕ ಜಾಲತಾಣಗಳಲ್ಲಿ ಸುಳ್ಳು ಸುದ್ಧಿಗಳ ಮೇಲೆ ನಿರಂತರ ನಿಗಾವಹಿಸುವಂತೆ ವೆಚ್ಚ ವೀಕ್ಷಕರು ಸಿಬ್ಬಂದಿಗಳಿಗೆ ತಿಳಸಿದರು.

ಈ ಸಂದರ್ಭದಲ್ಲಿ ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ, ಸಹಾಯಕ ವೆಚ್ಚ ವೀಕ್ಷಕರು ಮತ್ತು ನೋಡೆಲ್ ಅಧಿಕಾರಿಗಳು ಲೆಕ್ಕ ಪತ್ರ ತಂಡ ಎಸ್.ಕೆ.ನರಗಟ್ಟಿ ಸೇರಿದಂತೆ ನಿಯಂತ್ರಣ ಘಟಕ, ಲೆಕ್ಕಪತ್ರ ಘಟಕದ ಸಿಬ್ಬಂದಿಗಳು ಹಾಜರಿದ್ದರು.

ಇದಕ್ಕೂ ಮುನ್ನ ನಿಪ್ಪಾಣಿ, ಚಿಕ್ಕೋಡಿ–ಸದಲಗಾ, ಹುಕ್ಕೇರಿ ಹಾಗೂ ಯಮಕನಮರಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗಿರುವ ವಿವಿಧ ಚೆಕ್ ಪೋಸ್ಟಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

## ನೀರು ಸರಬರಾಜಿನಲ್ಲಿ ವ್ಯತ್ಯಯ

ಬೆಳಗಾವಿ: ಬೆಳಗಾವಿ ನಗರಕ್ಕೆ ನೀರು ಸರಬರಾಜಾಗುವ ಮಾರ್ಗದಲ್ಲಿ ಕೆಎಲ್ಇಡಿ ಮಾರ್ಟ್, ರಾಣಿ ಚೆನ್ನಮ್ಮ ಸರ್ಕಲ್, ಹಾಗೂ ಲಕ್ಷ್ಮೀ ಟೆಕ್ ಹತ್ತಿರ ಪೈಪ್ ಲೈನ್ ಸೋರಿಕೆಯಾಗಿರವುದರಿಂದ ಏ.17 ರಂದು ತುರ್ತುದುರಸ್ಥಿ ಕಾರ್ಯ ಕೈಗೊಳ್ಳಲಾಗುದಿದೆ. ಆದ್ದರಿಂದ ಏ.17 ರಿಂದ 18 ರವರೆಗೆ ಬೆಳಗಾವಿ ಉತ್ತರ ಹಾಗೂ ದಕ್ಷಿಣ ಭಾಗಕ್ಕೆ ನೀರು ಸರಬರಾಜು ಮಾಡುವಲ್ಲಿ ವ್ಯತ್ಯಯ ಉಂಟಾಗಲಿದೆ.

ಬೆಳಗಾವಿಯ ಉತ್ತರ ಭಾಗವಾಗಿರುವ ಕಣಬರ್ಗಿ, ಕೆಎಚ್‌ಬಿ ಕಣಬರ್ಗಿ, ಆಟೋನಗರ, ಉತ್ತರ ಪ್ರಾತ್ಯಕ್ಷಿಕ ವಲಯ, ಉತ್ತರ ಸಿಟಿ ಪ್ರದೇಶ, ಅಶೋಕ ನಗರದ ಕೆಲವು ಭಾಗ, ಸುಭಾಸ ನಗರ ಮತ್ತು ವೀರಭದ್ರ ನಗರದ ಕೆಲವು ಭಾಗ, ಶ್ರೀನಗರ, ಸೆಕ್ಟರ್ ನಂ.5,6,7,8 & 9, ಸದಾಶಿವ ನಗರ, ಸಿಟಿ ಪ್ರದೇಶ, ಬಿ.ಕೆ ಕಂಗ್ರಾಳಿ, ಗಾಂಧೀ ನಗರ, ಅಲರವಾಡ, ಬಸವನಕುಡಚಿ, ದೇವರಾಜ ಅರಸ ಕಾಲೋನಿ, ರುಕ್ಮಿಣಿ ನಗರ, ಅಜಾದ್ ಖಾನ್ ಸೊಸೈಟಿ, ವಿನಾಯಕ ನಗರ, ಹನುಮಾನ್ ನಗರ, ಟಿವಿ ಸೆಂಟರ್. ಬೆಳಗಾವಿ ದಕ್ಷಿಣ ಭಾಗವಾಗಿರುವ ಮಜಗಾಂವ, ರಾಜಾರಾಮನಗರ, ಆರ್. ಸಿ ನಗರ ಮೊದಲನೆ ಮತ್ತು ಎರಡನೇ ಹಂತ, ಮತ್ತು ಅದರ ಉಪ ಭಾಗಗಳು, ಟಿಳಕವಾಡಿ ನಾನಾವಾಡಿ, ವಡಗಾಂವ, ಶಹಾಪೂರ, ದಕ್ಷಿಣ ಪ್ರಾತ್ಯಕ್ಷಿಕ ವಲಯ. ಹಿಂದವಾಡಿ, ಮಜಗಾಂವ, ಬ್ರಹ್ಮ ನಗರ, ಜೈನಬಸ್ತಿ ಖಾಜಿ ಲೈನ, ಚಿದಂಬರ ನಗರ, ಅನಗೋಳ, ಮೃತ್ಯುಂಜಯ ನಗರ, ಹಳೆ ಬೆಳಗಾವಿ, ಓಂಕಾರ ನಗರ, ಪಾರಿಜಾತ ಕಾಲೋನಿ, ಭಾರತ ನಗರ, ಶಾಸ್ತ್ರಿ ನಗರ ಹಾಗೂ ಸಮರ್ಥ ನಗರಗಳಲ್ಲಿ ನೀರು ಸರಬರಾಜು ವ್ಯತ್ಯಯ ಉಂಟಾಗಲಿದೆ ಎಂದು ಯೋ.ಅ.ಫ, ಕುಸ್ಸೆಂಪ್–ಕೆ.ಯು.ಐ.ಡಿ.ಎಫ್.ಸಿ, ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಶಸ್ವಿ ಮೂರನೇ ಪ್ರದರ್ಶನದ 'ಪರಿಮಳದವರು' ನಾಟಕ



ಬೆಳಗಾವಿ: ನಗರದ ರಂಗಸಂಪದ ತಂಡದವರು ಇದೇ ದಿ. 14 ರವಿವಾರದಂದು ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರದಲ್ಲಿ ಜಿ.ಬಿ. ಜೋಶಿಯವರು ರಚಿಸಿದ 'ಪರಿಮಳದವರು' ನಾಟಕ ತುಂಬಿದ ಸಭಾಗೃಹದಲ್ಲಿ ಮೂರನೇ ಪ್ರಯೋಗವಾಗಿ ಪ್ರದರ್ಶನಗೊಂಡಿತು.

ಈ ಸಂದರ್ಭದಲ್ಲಿ ಕಾರಂಜಿ ಮಠದ ಶ್ರೀಗಳು ಮಾತನಾಡುತ್ತ 370 ವರ್ಷಗಳ ಹಿಂದೆ ಶ್ರೀ ರಾಘವೇಂದ್ರ ಸ್ವಾಮಿಗಳು ವೃಂದಾವನಸ್ಥರಾದರೂ ಈಗ ಮತ್ತು ಇನ್ನು ಮುಂದೆಯೂ ಕಾಮಧೇನು ಕಲ್ಪವೃಕ್ಷವಾಗಿ ಎಲ್ಲರ ಮನದಾಸೆಗಳನ್ನು ಈಡೇರುಸತ್ತ ಬಂದಿದ್ದಾರೆ. ಇಂದಿನ ಈ ಕಲಿಯುಗದಲ್ಲಿ ಇಂತಹ ಭಕ್ತಿ ಪ್ರಧಾನ ನಾಟಕಗಳು ಹೆಚ್ಚೆಚ್ಚು ಪ್ರದರ್ಶನಗೊಳ್ಳಬೇಕು. ಎಲ್ಲರೂ ಇಂತಹ ಮಹಾಮಹಿಮರ ಜೀವನ ಚರಿತ್ರೆಗಳನ್ನು ಅರಿತುಕೊಳ್ಳಬೇಕು ಎಂದು ಹೇಳಿದರು.

ಹಿರಿಯ ವಾಗ್ಮಿಗಳಾದ ಡಾ. ಬಸವರಾಜ ಜಗಜಂಪಿಯವರು ಮಾತನಾಡುತ್ತ ಇಂದು ಶ್ರೀ ರಾಘವೇಂದ್ರ ಸ್ವಾಮಿಯವರನ್ನು ಪ್ರತ್ಯಕ್ಷವಾಗಿ ನೋಡಿದ ಅನುಭವವಾಯಿತು. ಸ್ವಾಮೀಜಿಯವರು ವೃಂದಾವನಸ್ಥರಾಗುವ ಸಮಯದಲ್ಲಿಯಂತೂ ಕಣ್ಣುತುಂಬಿ ಬಂದಿತು. ನೈಜ ಅಭಿನಯದಿಂದ ಎಲ್ಲರ ಮನಗೆದ್ದಿದ್ದಾರೆ ಅದರಲ್ಲಿಯೂ ವಿಶೇಷವಾಗಿ ಡಾ. ಅರವಿಂದ ಕುಲಕರ್ಣಿಯವರು ಎಲ್ಲ ಭಕ್ತರ ಹೃದಯದಲ್ಲಿ ಉಳಿದಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕಾರಂಜಿ ಮಠದ ಗುರುಸಿದ್ಧ ಸ್ವಾಮಿಜಿ, ಪ್ರಯೋಜಕತ್ವವನ್ನು ವಹಿಸಿದ್ದ ಖ್ಯಾತ ನ್ಯಾಯವಾದಿಗಳಾದ ಎಸ್.ಎಂ. ಕುಲಕರ್ಣಿ ಮತ್ತು ಜಯಂತ ಜೋಶಿ ಅವರನ್ನು ಶಾಲು ಹೊದಿಸಿ ಸನ್ಮಾನಿಸಿದರು.

ಪರಿಮಳದವರು ನಾಟಕ ರಂಗಕ್ಕೆ ತರುವುದು ಒಂದು ಸವಾಲಾಗಿದ್ದು ಶ್ರೀಪತಿ ಮಂಜನಬೈಲು ಅವರ ನಿರ್ದೇಶನದಲ್ಲಿ ಮತ್ತು ರಾಘವೇಂದ್ರ ಸ್ವಾಮಿಯವರ ಪಾತ್ರದಲ್ಲಿ ಡಾ. ಅರವಿಂದ ಕುಲಕರ್ಣಿಯವರ ನೈಜ ಅಭಿನಯದಿಂದ ಆ ಸವಾಲನ್ನು ಎದುರಿಸಿ ಯಶಸ್ವಿಯಾಗಿದ್ದಾರೆ.

### ಅಗತ್ಯ ಸೇವೆಗಳಡಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಮತದಾನದಿಂದ ವಂಚಿತರಾಗದಂತೆ ನಿಗಾವಹಿಸಿ

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಸೂಚನೆ

ಚಿಕ್ಕೋಡಿ: ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಅಗತ್ಯ ಸೇವೆಗಳಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಹಾಗೂ ಮತದಾನ ದಿನದಂದು ಕಾರ್ಯನಿರ್ವಹಿಸುವ ಚುನಾವಣಾ ಸಿಬ್ಬಂದಿಗಳು ಮತದಾನದಿಂದ ವಂಚಿತರಾಗದಂತೆ ಅಗತ್ಯದ ಕ್ರಮಕೈಗೊಳ್ಳಲು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಸಿ.ಇ.ಓ. ಆದ ರಾಹುಲ ಶಿಂಧೆ ಅವರು ಸೂಚನೆ ನೀಡಿದರು.

ಚಿಕ್ಕೋಡಿ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ (ಎ.16)ರಂದು ಜರುಗಿದ ಸಹಾಯಕ ಚುನಾವಣಾಧಿಕಾರಿಗಳೊಂದಿಗಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಗತ್ಯ ಸೇವೆಗಳಡಿ ಹಾಗೂ ಮತದಾನದ ದಿನದಂದು ಕಾರ್ಯನಿರ್ವಹಿಸುವ ಪ್ರತಿಯೊಬ್ಬ ಅಧಿಕಾರಿ ಸಿಬ್ಬಂದಿಗಳಿಗೆ ವಿತರಿಸಲಾದ ನಿಗದಿತ ನಮೂನೆಗಳನ್ನು ಕ್ರೋಢಿಕರಿಸಿ




ಸಿಬ್ಬಂದಿಗಳಿಗೆ ನಿಗದಿಪಡಿಸಲಾದ ದಿನಾಂಕದಂದು ಮತದಾನಕ್ಕೆ ವ್ಯವಸ್ಥೆ ಕಲ್ಪಿಸಬೇಕು. ಈ ಪ್ರಕ್ರಿಯೆಯಲ್ಲಿ ಯಾವೊಬ್ಬ ಅಧಿಕಾರಿ ಸಿಬ್ಬಂದಿ ಮತದಾನದಿಂದ ವಂಚಿತರಾಗದಂತೆ ನಿಗಾವಹಿಸಲು ಅವರು ತಿಳಿಸಿದರು.

ವಿದ್ಶ್ಚ್ಲದ ವರ್ಷ ಮೇಲ್ಪಟ್ಟ ವಯೋವೃದ್ಧರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಗುರುತಿಸಲಾದ ವರ್ಷ ಮೇಲ್ಪಟ್ಟವರಿಗೆ ನಿಗದಿತ ವೇಳಾಪಟ್ಟಿಯಂತೆ ಮತದಾನ ಪ್ರಕ್ರಿಯೆ ಕೈಗೊಳ್ಳಬೇಕು. ಈ ಪ್ರಕ್ರಿಯೆಯಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಮತದಾನಕ್ಕೆ ಅಗತ್ಯದ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು. ಮನೆ ಮನೆಗೆ ಮತದಾನ ಪ್ರಕ್ರಿಯೆಗೆ ಬೇಕಾದ ಸಿಬ್ಬಂದಿ, ವಾಹನ, ಹಾಗೂ ಬೇಕಾದಂತಹ ಸಾಮಗ್ರಿಗಳ ವಿವರಗಳನ್ನು ಒದಗಿಸುವಂತೆ ತಿಳಿಸಿದ ಅವರು ಈ ಪ್ರಕ್ರಿಯೆಗೆ ನಿಯೋಜಿತ ಎಲ್ಲ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಗುರುತಿನ ಚೀಟಿ ಹಾಗೂ ಸಮವಸ್ತ್ರದ ವ್ಯವಸ್ಥೆ ಮಾಡಬೇಕು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಗುರುತಿಸಲಾಗುವ ಹಾಗೂ ಅತೀ ಮತಗಟ್ಟೆಗಳ ವ್ಯಾಪ್ತಿಯಲ್ಲಿನ ಮತದಾರರಲ್ಲಿ ಆತ್ಮ ವಿಶ್ವಾಸ ಹೆಚ್ಚಿಸಲು ಹೆಚ್ಚಿನ ಸ್ವೀಪ್ ಚಟುವಟಿ–ಕೆ, ಪೋಲಿಸ್ ಇಲಾಖೆಯಿಂದ ಪಥ–'ಸಂಚಲನ ಆಯೋಜಿಸಬೇಕು ಈ ಕು–ರಿತು ಈಗಿನಿಂದಲೇ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ರೂಪುರೇಷೆಗಳನ್ನು ತಯಾರಿಸಲು ತಿಳಿಸಿದರು.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗಿದ್ದು ವಾಹನಗಳ ಕುರಿತು ಅನುಮತಿ ಕೋರಿ ಸಲ್ಲಿಸುವ ಅರ್ಜಿಗಳ ಕುರಿತು ಕುಲಂಕೂಷವಾಗಿ ಪರಿಶೀಲಿಸಿ ಅನುಮತಿ ನೀಡುವದು. ಅಲ್ಲದೇ ಅನುಮತಿ ನೀಡಿದರ ವೆಚ್ಚದ ಮಾಹಿತಿಯನ್ನು ಕೂಡಲೇ ನೀಡಬೇಕು. ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ಜರುಗಿಸುವ ನಿಟ್ಟಿನಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ರಚಿಸಲಾದ ಎಫ್.ಎಸ್.ಟಿ ಹಾಗೂ ಎಸ್.ಎಸ್.ಟಿ ತಂಡಗಳು ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸುವದರ ಮೂಲಕ ಚುನಾವಣಾ ಅಕ್ರಮಗಳನ್ನು ನಿಯಂತ್ರಿಸಬೇಕು.

ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಚೆಕ್ ಪೋಸ್ಟಗಳಿಗೆ ನಿಯಮಿತವಾಗಿ ಭೇಟಿ ನೀಡುವದು ಹಾಗೂ ಸ್ಟ್ರೊಂಗ್ ರೂಂಗಳಿಗೆ ಭೇಟಿ ನೀಡಿ ಅಲ್ಲಿನ ಭದ್ರತೆ ಬಗ್ಗೆ ನಿಯಮಿತವಾಗಿ ಪರಿಶೀಲಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಚುನಾವಣಾಧಿಕಾರಿಗಳ ಕಚೇರಿಯ ಸಹಾಯ ಚುನಾವಣಾಧಿಕಾರಿ ಬಸವರಾಜ ಅಡವಿಮಠ ಸೇರಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಹಾಜರಿದ್ದರು.

## ಕೆಎಲ್‌ಇ ಸಂಗೀತ ಶಾಲೆಯಲ್ಲಿ ಬೇಸಿಗೆ ಶಿಬಿರ ಮುಕ್ತಾಯ




ಬೇಸಿಗೆಯ ಜಳದಲ್ಲಿ ಪುಟ್ಟ ಮುದ್ದುಮಕ್ಕಳ ಸ್ವರ ಇಂಚರ ತಂಗಾಳಿಯನ್ನು ಹೊರಸೂಸಿ ತಂಪಾಗಿಸಿತು ಮಾತ್ರವಲ್ಲದೆ ಕೇಳುಗ ಸಹೃದಯರನ್ನು ಸ್ವರಲೋಕಕ್ಕೆ ಕರೆದೊಯ್ಯಿತು. ಇದು ಜರುಗಿದ್ದು ಕೆಎಲ್‌ಇ ಕಾಹೆರ್‌ನ ಸಂಗೀತ ಶಾಲೆಯ ಬೇಸಿಗೆ ಶಿಬಿರದಲ್ಲಿ. ದಿನಾಂಕ ಮಾರ್ಚ, 26 ರಿಂದ ಎಪ್ರಿಲ್ 15ರ ವರೆಗೆ ಜರುಗಿದ ಬೇಸಿಗೆ ಶಿಬಿರದಲ್ಲಿ 5 ರಿಂದ 15 ವರ್ಷ ವಯೋಮಾನದ ಸುಮಾರು 95 ಮಕ್ಕಳು ಪಾಲ್ಗೊಂಡಿದ್ದರು. ಶಿಬಿರದಲ್ಲಿ ಅವ–ರಿಗೆ ತಬಲಾ, ಹಾರಮೋನಿಯಂ ಹಾಗೂ ಸಂಗೀತ ಪಾಠವನ್ನು ಹೇಳಿಕೊಡಲಾಯಿತು.

ಕೆಎಲ್‌ಇ ಸಂಗೀತ ಶಾಲೆಯ ಸಂಂ–ಯೋಜಕರಾದ ಡಾ. ರಾಜೇಂದ್ರ ಭಾಂಡನಕರ, ಪ್ರಾಂಶುಪಾಲರಾದ ಪಂಡಿತ್ ರಾಜಾರಾಮ್ ಅಂಬರಡೇಕರ, ಪ್ರಾಧ್ಯಾಪಕರಾದ ಡಾ. ಸುನೀತಾ ಪಾಟೀಲ, ಡಾ. ದುರ್ಗಾ ನಾಡಕರ್ಣಿ, ಸಂಗೀತಾ ಬಾಂದೇಕರ, ಭಕ್ತಿ ಅಂಬರಡಿಕರ್, ಹಾರ್ಮೋನಿಯಂ ವಾದಕರಾದ ಯಾದವೇಂದ್ರ ಪೂಜಾರಿ, ತಬಲವಾದ ಕರಾದ ಜಿತೇಂದ್ರ ಸಾಬಣ್ಣವರ್, ರಾಹುಲ್ ಮಂಡೂಲ್ಕರ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ನಿರೂಪಣೆಯನ್ನು ಶ್ರೀಮತಿ ಪ್ರತಿಭಾ ಕಳ್ಳಿಮಠ ಮಾಡಿದರು.

ಶಿಬಿರಾರ್ಥಿ ಮಕ್ಕಳು ಅತ್ಯಂತ ಸುಶ್ರಾವ್ಯವಾಗಿ ಕನ್ನಡ, ಮರಾಠಿ, ಹಿಂದಿ ಹಾಡುಗಳನ್ನು ಹಾಡಿ ಎಲ್ಲರನ್ನು ರಂಜಿಸಿದರು. ತಬಲಾ, ಹಾರ್ಮೋನಿಯಂಗಳನ್ನು ನುಡಿಸುವ ಮೂಲಕ ಸಭಿಕರನ್ನು ಮಂತ್ರಮುಗ್ಧಗೊಳಿಸಿದರು. ಪ್ರತಿವರ್ಷ ಕೆ–ಎಲ್‌ಇ ಸಂಗೀತ ಶಾಲೆಯು ಶಿಬಿರವನ್ನು ನಡೆಸುತ್ತಿದ್ದು ಅನೇಕ ಪ್ರತಿಭಾವಂತ ಮಕ್ಕಳನ್ನು ರೂಪಿಸುವ ಮಹತ್‌ರ ಕಾರ್ಯಮಾಡುತ್ತಿದೆ. ಮಕ್ಕಳಲ್ಲಿರುವ ಸೂಪ್ತ ಪ್ರತಿಭೆಗೆ ನೀರೆರೆದು ಪೋಷಿಸುತ್ತಿದೆ. ಅವರಲ್ಲಿ ಸಂಗೀತ ಅಭಿರುಚಿಯನ್ನು ಹೆಚ್ಚಿಸುವ ಗುರುತರ ಕಾರ್ಯವನ್ನು ಸಂಗೀತ ಶಾಲೆಯ ಮಾಡುತ್ತಿದೆ ಎಂದು ಪಾಲಕರು ಅಭಿಪ್ರಾಯಗಳನ್ನು ಹಂಚಿಕೊಂಡರು.

## ಹಿರಿಯ ಕಲಾವಿದ ದ್ವಾರಕೀಶ್ ನಿಧನಕ್ಕೆ ಡಾ. ಪ್ರಭಾಕರ್ ಕೋರೆ ಕಂಬನಿ



ಬೆಳಗಾವಿ: ನಾಡು ಕಂಡ ಅಪರೂಪದ ಶ್ರೇಷ್ಠ ಕಲಾವಿದ, ನಿರ್ಮಾಪಕ, ನಿರ್ದೇಶಕ ದ್ವಾರ್ಕೀಶ್ ದಿನಕ್ಕೆ ಕೆಎಲ್‌ಇ ಸಂಸ್ಥೆಯ ಕಾರ್ಯಧ್ಯಕ್ಷರಾದ ಡಾ. ಪ್ರಭಾಕರ್ ಕೋರೆಯವರು ತೀವ್ರ ದುಃಖವನ್ನು ವ್ಯಕ್ತಪಡಿಸಿದ್ದಾರೆ.

ಕನ್ನಡ ಚಲನಚಿತ್ರರಂಗದಲ್ಲಿ ನಟ ದ್ವಾರಕೀಶ್ ಅವರು ನೀಡಿರುವ ಕೊಡುಗೆ ಅನುಪಮವೆನಿಸಿದೆ.

ಡಾ. ರಾಜಕುಮಾರ್ ಅವರಷ್ಟೇ ಸಮಾನವಾಗಿ ಪಾತ್ರಗಳಿಗೆ ಜೀವ ತುಂಬುವ ಕೆಲಸವನ್ನು ಮಾಡಿದ ಅವರು ಕುಟುಂಬ ಹಾಗೂ ಸಮಾಜಮುಖಿಯಾದ ಚಲನಚಿತ್ರಗಳನ್ನು ಮಾಡಿದರು. ಯಾವುದೇ ಪಾತ್ರವಿದ್ದರೂ ಅದಕ್ಕೆ ಜೀವತುಂಬ ಕೆಲಸವನ್ನು ಮಾಡಿದರು. ಅವರ ಹಾಸ್ಯ ಪ್ರಧಾನವಾದಂತಹ ಪಾತ್ರಗಳು ಕನ್ನಡ ಕಲಾಭಿಮಾನಿಗಳಿಗೆ ಹಸಿರಾಗಿ ಉಳಿದಿದೆ.

ಪ್ರಥಮ ಬಾರಿಗೆ ವಿದೇಶದಲ್ಲಿಯೂ ಕೂಡ ಚಿತ್ರಗಳನ್ನು ತೆಗೆದ ದ್ವಾರಕೀಶ್ ಅವರು ಒಂದು ಕಾಲಘಟ್ಟದಲ್ಲಿ ಕನ್ನಡ ಬೆಳ್ಳಿತೆರೆಯನ್ನು ಅಘಾತವಾಗಿ ವಿಸ್ತರಿಸಿ, ಅದರ ಘನತೆಯನ್ನು ಹೆಚ್ಚಿಸಿದರು.

ಗುರುಶಿಷ್ಯರು, ಸಿಂಗಾಪುರದಲ್ಲಿ ರಾಜಾಕುಳ್ಳ, ಆಪ್ತಮಿತ್ರ ನೂರಾರು ಮರೆಯಲಾಗದ ಅವರ ಚಿತ್ರಗಳು ಕಣ್ಣು ಮುಂದೆ ಸುಳಿದು ಹೋಗುವೆ.

ದಕ್ಷಿಣ ಭಾರತ ಚಲನಚಿತ್ರ ರಂಗದಲ್ಲಿ ಬಿರುಗಾಳಿಯನ್ನು ಉಂಟು ಮಾಡಿದ್ದ ದ್ವಾರ್ಕೀಶ ಬದುಕಿನಲ್ಲಿ ಹಲವಾರು ಏರುಪೇರುಗಳನ್ನು ಕಂಡರೂ ಧೃತಿಗೆಡದೆ ಕನ್ನಡ ಚಲನಚಿತ್ರ ಕ್ಷೇತ್ರವನ್ನು ಪೋಷಿಸಿ ಬೆಳೆಸಿದರು. ಅವರ ಅಗಲಿಕೆ ಸಿನಿಮಾ ರಂಗವನ್ನು, ಸಮಸ್ತ ನಾಡಿನ ಜನತೆಯನ್ನು ಬಡವಾಗಿಸಿದೆ. ಭಗವಂತನ ಅವರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲೆಂದು ಡಾ.ಕೋರೆಯವರು ಪ್ರಾರ್ಥಿಸಿದ್ದಾರೆ.

## ಲೋಕಸಭಾ ಚುನಾವಣೆ: ಸಾರ್ವಜನಿಕರಿಗೆ ಗುಲಾಬಿ ಹೂವು ನೀಡಿ ಮತದಾನ ಜಾಗೃತಿ

ಬೆಳಗಾವಿ: ಇಲ್ಲಿನ ಕಿಲ್ಲಾ ಕೋಟೆಯ ದುರ್ಗಾದೇವಿ ಮಂದಿರದ ಆವರಣದಲ್ಲಿ ಮಂಗಳವಾರ (ಏ–16) ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆಗಿರುವ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಾರ್ವಜನಿಕ–ರಿಗೆ ಗುಲಾಬಿ ಹೂವು ನೀಡುವ ಮೂಲಕ ಕಡ್ಡಾಯವಾಗಿ ಮತದಾನ ಮಾಡುವಂತೆ ಮನವಿ ಮಾಡಿಕೊಂಡರು.

ಜಿಲ್ಲಾ ಪಂಚಾಯತಿ ಸಿಇಒ ರಾಹುಲ್ ಶಿಂಧೆ ಅವರು ಮಾತನಾಡಿ, ಲೋಕಸಭೆಯ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಶೇ.100 ರಷ್ಟು ಮತದಾನ ಪ್ರಮಾಣದ ಏರಿಕೆಗೆ ಸಹಕ–ರಿಸಬೇಕು ಎಂದರು.

ಸ್ವೀಪ್ ಸಮಿತಿಯ ಮೂಲಕ ಮತದಾರರಲ್ಲಿ ಮತದಾನದ ಜಾಗೃತಿ ಮಾಡಲಾಗುತ್ತಿದೆ. ಸಂಗೊಳ್ಳಿ ರಾಯಣ್ಣ ಬಿ.ಇ.ಡಿ. ಕಾಲೇಜು ಪ್ರಶಿಕ್ಷಣಾರ್ಥಿಗಳ ಮೂಲಕ ಮತದಾರರಿಗೆ ಪುಷ್ಪವನ್ನು ನೀಡಿ ಜಾಗೃತಿ ಮೂಡಿಸಲು ಈ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳಲಾಗಿದೆ. ಎಲ್ಲ



ಮತದಾರರು ಲೋಕಸಭೆ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಮನವಿ ಮಾಡಿದರು.

ಜಾಥಾ ಕಾರ್ಯಕ್ರಮವು ನಗರದ ದುರ್ಗಾ ದೇವಿ ಮಂದಿರದಿಂದ ಪ್ರಾರಂಭವಾಗಿ ಕೇಂದ್ರ ಬಸ್ ನಿಲ್ದಾಣ, ಖಡೇಬಜಾರ್, ಶನಿವಾರ ಖೂಟ, ಕಾಕತಿವೇಸ್ ರಸ್ತೆ ಮೂಲಕ ಚನ್ನಮ್ಮ ವೃತ್ತದವರೆಗೆ ಜರುಗಿತು.

ಚನ್ನಮ್ಮ ವೃತ್ತದಲ್ಲಿ ಕಡ್ಡಾಯ ಮತದಾನ ಜಾಗೃತಿ ಕುರಿತು ಪ್ರಶಿಕ್ಷಣಾರ್ಥಿಗಳಿಂದ ಮಾನವ ಸರಪಳಿ ಮಾಡಲಾಯಿತು. ಸಂಗೊಳ್ಳಿ ರಾಯಣ್ಣ ಬಿ.ಇ.ಡಿ ಕಾಲೇಜಿನ ಸುಮಾರು 200 ಪ್ರಶಿಕ್ಷಣಾರ್ಥಿಗಳು, ಜಿಪಂ ಅಧಿಕಾರಿಗಳು/ಸಿಬ್ಬಂದಿ ದಾರಿ ಉದ್ದಕ್ಕೂ ಸಾರ್ವಜನಿಕರಿಗೆ ಗುಲಾಬಿ ಹೂ ನೀಡುವುದು ನಾಮಫಲಕ ಪ್ರದರ್ಶನ, ಕರಪತ್ರಗಳ ಹಂಚಿಕೆ ಹಾಗೂ ಧ್ವನಿ ವರ್ಧಕಗಳ ಪ್ರಚಾರ (ಜಿಂಗಲ್ಸ್)ಗಳ ಮೂಲಕ ಕಡ್ಡಾಯ ಮತದಾನ ಜಾಗೃತಿ ಕುರಿತು ವ್ಯಾಪಕ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಸಹಾಯಕ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಜಿಲ್ಲಾ ಪಂ ಯೋಜನಾ ನಿರ್ದೇಶಕ ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಡಾ: ಎಮ್ ಕೃಷ್ಣರಾಜು, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ, ಜಿಲ್ಲಾ ಚುನಾವಣೆ ವೆಚ್ಚದ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಜಿಲ್ಲಾ ಐ.ಇ.ಸಿ ಸಂಯೋಜಕ ಪ್ರಮೋದ ಗೋಡೆಕರ, ಸಂಗೊಳ್ಳಿ ರಾಯಣ್ಣ ಬಿ.ಇ.ಡಿ ಕಾಲೇಜು ಪ್ರಾಂಶುಪಾಲ ಬಿ.ಜಿ.ಧಾರವಾಡ, ಸಹಾಯಕ ಉಪನ್ಯಾಸಕ ಎನ್.ಎಸ್. ಜಾಧವ, ಜಿ.ಆರ್. ಕೊಟೆನ್ನವರ ಮತ್ತಿತರು ಉಪಸ್ಥಿತರಿದ್ದರು.



## ಕಾಂಗ್ರೆಸ್ ಅಭ್ಯರ್ಥಿ ಡಾ. ಅಂಜಲಿ ನಿಂಬಾಳ್ಕರ್ ನಾಮಪತ್ರ ಸಲ್ಲಿಕೆ

ಉತ್ತರಕನ್ನಡ: ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅಂಜಲಿ ನಿಂಬಾಳ್ಕರ್ ಅವರು ಮಂಗಳವಾರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಅವರಿಗೆ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್ವಿ. ದೇಶಪಾಂಡೆ, ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ್, ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಉಪಸ್ಥಿತರಿದ್ದರು.

## ಚಿತ್ರಕಲೆಯೆನ್ನುವುದು ಜಾತಿ ಮತ ಪಂತವನ್ನು ಮೀರಿದ್ದು: ಡಾ. ಪಿ.ಜಿ. ಕೆಂಪಣ್ಣವರ

ಬೆಳಗಾವಿ: ಚಿತ್ರಕಲಾಕ್ಷೇತ್ರಕ್ಕೆ ಜಾತಿ, ಮತ, ಪಂತ ಎಂಬುದಿರುವುದಿಲ್ಲ. ಕಲೆಯೆನ್ನುವುದು ಅವುಗಳನ್ನೆಲ್ಲ ಮೀರಿ ನಿಂತಿದೆ. ಕಲೆಗೆಂದೂ ಸೋಲಿಲ್ಲ. ಸರ್ಕಾರ ಕಲಾವಿದರನ್ನು ಗುರುತಿಸಲು ವಿಫಲವಾದಾಗ ಇಂಥ ಸಂಘ ಸಂಸ್ಥೆಗಳು ಅವರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತವೆ. ಇದೊಂದು ಅಭಿಮಾನದ ಸಂಗತಿ. ಎಲೆಮರೆ ಕಾಯೆಯಂತಿರುವ ಕಲಾವಿದರನ್ನು ಬೆಳಕಿಗೆ ತರುತ್ತಿರುವ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರಿ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ನಿವೃತ್ತ ಉಪನ್ಯಾಸಕರಾದ ಡಾ, ಪಿ. ಜಿ. ಕೆಂಪಣ್ಣವರ ಇಂದಿಲ್ಲಿ ಹೇಳಿದರು.

ಬೆಳಗಾವಿಯ ತಿಲವಾಡಿಯ ಎರಡನೇ ರೇಲ್ವೆಗೇಟ್ ಹತ್ತಿರವಿರುವ ಕಲಾಮಹರ್ಷಿ ಕೆ. ಬಿ. ಕುಲಕರ್ಣಿ ಆರ್ಟ ಗ್ಯಾಲರಿ (ವಾರೇಕರ ನಾಟ್ಯ ಸಂಘ) ಸಭಾ ಭವನದಲ್ಲಿ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರಿ ಸಂಘಟನೆಯವರಿಂದ ಇದೇ ದಿ. 14 ಮತ್ತು 15 ಎರಡು ದಿನಗಳ ಕಾಲ ರಾಷ್ಟ್ರಮಟ್ಟದ ಕಲಾ ಪ್ರದರ್ಶನ ಉದ್ಘಾಟನೆ, ಚಿತ್ರಕಲಾ ಪ್ರದರ್ಶನ ಮತ್ತು ಮಕ್ಕಳ ಚಿತ್ರಗಳ ಆಯ್ಕೆ– ಸ್ಪರ್ಧೆ ವರ್ಣಕಲಾ ಪ್ರಶಸ್ತಿ ಪ್ರದಾನ 2023–24 ಜರುಗಿದವು.

ವರ್ಣಕಲಾಶ್ರೀ ಪ್ರಶಸ್ತಿ ಪ್ರದಾನ ಮಾಡಿದ ಡಾ. ಕೆಂಪಣ್ಣವರ ಮೇಲಿನಂತೆ ಅಭಿಪ್ರಾಯ ಪಟ್ಟರು.

ಮುಂದೆ ಮಾತನಾಡುತ್ತ ಡಾ. ಕೆಂಪಣ್ಣವರ ಅವರು, ಚಿತ್ರಕಲಾ ಕ್ಷೇತ್ರದಲ್ಲಿ ಬೆಳಗಾವಿಯದ್ದು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಚಂದ್ರಕಾಂತ ಕುಸನೂರ, ಕೆ. ಬಿ.



ಕುಲಕರ್ಣಿ ಮುಂತಾದವರು ಈ ಕ್ಷೇತ್ರದಲ್ಲ ವಿಶೇಷವಾದ ಕೆಲಸವನ್ನು ಮಾಡಿದ್ದಾರೆ ಆ ಪರಂಪರೆಯನ್ನು ನಗರದ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರ್ ಯವರು ಮುಂದರೆವರಸಿಕೊಂಡು ಹೋಗುತ್ತಿರುವುದು ಸಂತೋಷದ ಸಂಗತಿ.

2023–24 ನೇ ಸಾಲಿನ ವರ್ಣಕಲಾಶ್ರೀ ಪ್ರಶಸ್ತಿಗೆ ಭಾಜನರಾದ ಗಣೇಶ ದೊಡಮನಿ, ಸಚ್ಚಿನ ಉಪಾಧ್ಯೆ, ಚಂದ್ರಶೇಖರ ಯಡ್ರಾಮಿ, ರಮೇಶ ಸಾಸನೂರ, ರಾಜಕುಮಾರ ಯಲಸ್ಕಂಗಿಕರ, ಅಜಿತ ಹುಲಮನಿ ಮತ್ತು ವಿಶ್ವಕಲಾ ಕಲಾದಿನ ಪ್ರಶಸ್ತಿ ಪುರಸ್ಕೃತರಾದ ಅತಿಫ್ ಪಾಚಾಪುರಿ ರನ್ನು ಶಾಲು ಹೊದಿಸಿ, ಹಾರ ಹಾಕಿ, ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಅಂತರರಾಷ್ಟ್ರೀಯ ಕಲಾವಿದರಾದ ಡಾ, ವಿಜಯ ಹಗರಗುಂಡಗಿಯವರು ಸಮಾರಂಭವನ್ನು ಉದ್ಘಾಟಿಸದರು. ಹಿರಿಯ ಚಿತ್ರಕಲಾವಿದರಾದ ಜಗಧೀಶ ಕುಂಟೆ, ಸುಭಾಷ ದೇಸಾಯಿ, ಅತಿಥಿಗಳಾಗಿ ಆಗಮಿಸಿದ್ದರು. ಸಂಘದ ಅಧ್ಯಕ್ಷರಾದ ನಾಗೇಶ ಚಿಮರೊಲ, ಕಾರ್ಯದರ್ಶಿ ಸಂತೋಷ ಮಲ್ಲೊಳ್ಳಿ, ರವೀಂದ್ರ ಹೋಮಕರ, ಭಾಸ್ಕರ ಪಾಟೀಲ, ಸುಶೀಲ ತರಬರ, ಭರಮಣ್ಣ ವೇತಾಳ, ರೇಹಮತುಲ್ಲಾಹ ಶಿಂದೊಳಕರ, ಸ್ವೇತಾ ಪಾಟೀಲ, ಕೇಶವ್ವಾ ಎಸ್. ವಾಲಿ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ದಿಲೀಪಕುಮಾರ ಕಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ದೇಮಣ್ಣ ಕಟಂಬಳೆ ನಿರೂಪಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089